MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

YUVA MARGA KANNADA DAILY NEWS PAPER

ಸಂಪುಟ: 04 | ಸಂಚಿಕೆ: 330 | ಬುಧವಾರ : 22–10–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 04 | ISSUE: 330 | WEDNESDAY : 22–10–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಶಾಂತಿ, ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸರ ಸೇವೆ ಸ್ಮರಣೀಯ: ಜಿಲ್ಲಾಧಿಕಾರಿ ನಿತೀಶ್ ಕೆ.



**ಯುವ ಮಾರ್ಗ ಸುದ್ದಿ**

**ರಾಯಚೂರು,ಅ.21–** ಸಮಾಜದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಹಗಲಿರುಳು ಶ್ರಮಿಸುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯ ಕಾರ್ಯ ಅತ್ಯಂತ ಶ್ಲಾಘನೀಯವಾಗಿದೆ.

ತುರ್ತು ಸಂದರ್ಭದಲ್ಲಿ ಸಿದ್ಧಾರಾಗುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯ ಪ್ರಾಣ ತ್ಯಾಗವನ್ನು ನಾವೆಲ್ಲರೂ ಸ್ಮರಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಹೇಳಿದರು.

ಅಕ್ಟೋಬರ್ 21ರ ಮಂಗಳವಾರ ದಂದು ನಗರದ ಜಿಲ್ಲಾ ಪೊಲೀಸ್ ಡಿಎಆರ್ ಮೈದಾನದಲ್ಲಿ ಆಯೋಜಿಸಿದ್ದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ದೇಶದಲ್ಲಿ ಕಾನೂನು ಸುವ್ಯವಸ್ಥೆ ಸರಿಯಾಗಿದ್ದರೆ ಮಾತ್ರ ಎಲ್ಲ ಕ್ಷೇತ್ರಗಳಲ್ಲಿ ಪ್ರಗತಿ ಸಾಧಿಸಲು ಸಾಧ್ಯವಾಗುತ್ತದೆ. ದೇಶದ ಏಳಿಗೆಗೆ ಕಾನೂನು ಸುವ್ಯವಸ್ಥೆ, ಶಾಂತಿ ಪಾಲನೆ ಭದ್ರ ಬುನಾದಿ ಇದ್ದಂತೆ. ಇಂತಹ ಕೆಲಸವನ್ನು ಕೈಗೊಳ್ಳುವ ವೇಳೆ ಕರ್ತವ್ಯದಲ್ಲಿದ್ದಾಗ ಪ್ರಾಣ ತ್ಯಾಗ ಮಾಡುವ ಪೊಲೀಸ್ ಸಿಬ್ಬಂದಿ ಬಗ್ಗೆ ಸಮಾಜ ಹೆಮ್ಮೆ ಪಡಬೇಕು ಎಂದರು.

ರಾಯಚೂರು ಜಿಲ್ಲೆಯು ಶಾಂತಿ ಸೌಹಾರ್ತಗೆ ಹೆಸರಾಗಿದೆ. ಶಿಕ್ಷಣ, ಆರೋಗ್ಯ ಸೇರಿದಂತೆ ಬೇರೆ ಬೇರೆ ರಂಗಗಳಲ್ಲಿ ಪ್ರಗತಿಯಾಗುತ್ತಿದೆ ಎಂದರು. ಕೆ.ಕೆ.ಆರ್.ಡಿ.ಬಿ ಅನುದಾನ ಬಳಸಿಕೊಂಡು ಪೊಲೀಸ್ ಇಲಾಖೆಯಲ್ಲಿ ವಿವಿಧ ಕಾಮಗಾರಿ ಗಳನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಮಾಡಿರುವ ಸೇವೆ ಸ್ಮರಣೀಯವಾಗಿದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ ಅವರು ಮಾತನಾಡಿ, 2025ರಲ್ಲಿ ರಾಷ್ಟ್ರಮಟ್ಟದಲ್ಲಿ ಕಾನೂನುಶಾಂತಿ ಪಾಲನೆಯ ಹೋರಾಟದಲ್ಲಿ 191 ಪೊಲೀಸರು ಹಾಗೂ ಕರ್ನಾಟಕದಲ್ಲಿ 9 ಪೊಲೀಸರು ತಮ್ಮ ಪ್ರಾಣ ಕಳೆದುಕೊಂಡಿದ್ದಾರೆ. ಅವರ ಸೇವೆ ಸ್ಮರಿಸೋಣ ಎಂದು ತಿಳಿಸಿದರು.(2ನೇ ಪುಟಕ್ಕೆ)

## ಅ.29 ರಿಂದ ಕರೆಗುಡ್ಡ ಶ್ರೀಮಹಾಂತೇಶ್ವರ ಮಠದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು: ಶ್ರೀನೀರಂಜನದೇವರು



**ಯುವ ಮಾರ್ಗ ಸುದ್ದಿ**

**ಮಾನ್ವಿ,ಅ.21–** ಪಟ್ಟಣದ ಶ್ರೀ ಒಳಬಳ್ಳಾರಿ ಶ್ರೀ ಚನ್ನಬಸವೇಶ್ವರ ಪ್ರಸಾದ ನಿಲಯದ ಸಭಾಂಗಣದಲ್ಲಿ ತಾಲೂಕಿನ ಕರೆಗುಡ್ಡ ಗ್ರಾಮದಲ್ಲಿನ ಶ್ರೀ ಮಹಾಂತೇಶ್ವರ ಮಠದ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಕುರಿತು ನಡೆದ ಶ್ರೀ ಮಠದ ಭಕ್ತರ ಪೂರ್ವ ಭಾವಿ ಸಭೆಯಲ್ಲಿ ಮೈಸೂರಿನ ನೀರಂಜನದೇವರು ಮಾತನಾಡಿ ತಾಲೂಕಿನ ಕರೆಗುಡ್ಡ ಶ್ರೀ ಮಹಾಂತೇತ್ವರ ಮಠವು ಶ್ರೀ ಮಹಾಂತೇಶ್ವರ ಸ್ವಾಮಿಗಳ ತಪೋಭೂಮಿಯಾಗಿದ್ದು ಶರೀ ಮಠದಲ್ಲಿ ಶ್ರೀ ಅಂಬಮಠದ ಶ್ರೀ ಅಂಬದೇವಿಯು ನೆಲೆಸಿದ ಪುಣ್ಯಮಯ ಜಾಗೃತ ಕ್ಷೇತ್ರವಾಗಿದ್ದು ಶ್ರೀಮಠದ ಪ್ರಸ್ತುತ ಶ್ರೀಗಳಾದ ಶ್ರೀಮಹಾಂತಲಿಂಗ ಮಹಾಸ್ವಾಮಿಗಳ ಪಟ್ಟಾಧಿಕಾರ ಮಹೋತ್ಸವದ ರಜತಮಹೋತ್ಸವ ಕಾರ್ಯ ಕ್ರಮವನ್ನು ಶ್ರೀ ಮಠದ ಭಕ್ತರು ವಿಶೇಷವಾಗಿ ಆಚರಿಸುವ ಉದ್ದೇಶದಿಂದ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು.ಅ.29 ರಿಂದ ನ.6 ರವರಿಗೆ ಪ್ರತಿದಿನ ಸಂಜೆ 6–30ರಿಂದ ಮಹಾತ್ಮರ ಜೀವನ ದರ್ಶನ ಪ್ರವಚನ ಕಾರ್ಯಕ್ರಮ ನಡೆಯಲಿದೆ,

ನ.1 ರಂದು ಬೆಳಿಗ್ಗೆ 9 ರಿಂದ ಗ್ರಾಮದ ಪ್ರಮುಖ ರಾಜಬೀದಿಗಳಲ್ಲಿ ಬಾಳೆಹೊನ್ನೂರು ರಂಭಾಪುರಿ ಪೀಠದ ಜಗದ್ಗುರು ಶ್ರೀ ವೀರಸಿಂಹಾಸನಾಧೀಶ್ವರ ಪ್ರಸನ್ನ ರೇಣುಕ ಡಾ.ವೀರಸೋಮೇಶ್ವರ ರಾಜದೇಸಿಕೇಂದ್ರ ಶಿವಾಚಾರ್ಯ ಭಗವತ್ಪಾದರ ಅಡ್ಡಪಲ್ಲಕ್ಕಿ ಮಹೋತ್ಸವ ಮತ್ತು ಧರ್ಮ ಸಭೆ ಕಾರ್ಯಕ್ರಮ ನಡೆಯಲಿದೆ.
(2ನೇ ಪುಟಕ್ಕೆ)

## ಅನೈತಿಕ ಪೊಲೀಸ್‌ಗಿರಿಗೆ ಅಂಕುಶ

**ಬೆಂಗಳೂರು, ಅ. 21–** ರಾಜ್ಯದಲ್ಲಿ ಅನೈತಿಕ ಪೊಲೀಸ್‌ಗಿರಿಗೆ ಕಡಿಹಾಣ ಬಿದ್ದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.



ಬೆಂಗಳೂರಿನ ಡಿಎಆರ್ ಮೈದಾನದಲ್ಲಿಂದು ನಡೆದ ಪೊಲೀಸ್ ಸಂಸ್ಮರಣಾ ದಿನಾಚರಣೆಯಲ್ಲಿ ಹುತಾತ್ಮ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಗೌರವ ಸಲ್ಲಿಸಿ ಮಾತನಾಡಿದ ಅವರು, ರಾಜ್ಯದ ಘನತೆ ಅಭಿವೃದ್ಧಿ ಮತ್ತು ಪ್ರಗತಿಗೆ ಕಂಟಕವಾಗಿದ್ದ ಸಂವಿಧಾನ ವಿರೋಧಿ ಪೊಲೀಸ್ ಗಿರಿಗೆ ರಾಜ್ಯದಲ್ಲಿ ಸಂಪೂರ್ಣ ಕಡಿವಾಣ ಬಿದ್ದಿದೆ. ಅನೈತಿಕ ಪೊಲೀಸ್ ಗಿರಿಗೆ ಕಡಿವಾಣ ಹಾಕಿದ ಶ್ರೇಯಸ್ಸು ಪೊಲೀಸರಿಗೆ ಸಲ್ಲಬೇಕು ಎಂದು ಹೇಳಿದರು.

ರಾಜ್ಯದಲ್ಲಿ ಗೃಹ ಇಲಾಖೆ ಶಾಂತಿ ಸುವ್ಯವಸ್ಥೆ ಕಾಪಾಡಿದರೆ ರಾಜ್ಯದ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ಅವರು ತಿಳಿಸಿದರು.ಪೊಲೀಸರ ಶ್ರಮದಿಂದ ಅನೈತಿಕ ಪೊಲೀಸ್ ಗಿರಿಗೆ ಕಡಿವಾಣ ಬಿದ್ದಿರುವುದು ಉತ್ತಮ ಕೆಲಸ. ಅದೇ ರೀತಿ ಮಾದಕ ವಸ್ತುಗಳ ಹಾವಳಿಗೂ ಕಡಿವಾಣ ಬಿದ್ದಿದೆಯಾದರೂ ಇದನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಬೇಕಿದೆ ಎಂದರು.ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಕಾಪಾಡುವಿಕೆ, ಅನೈತಿಕ ಪೊಲೀಸ್ ಗಿರಿಗೆ ಕಡಿವಾಣ, ಮಾದಕ ವಸ್ತುಗಳ ನಿಯಂತ್ರಣ ಹೀಗೆ ಹಲವು ಸಾಧನೆಗಳ ಶ್ರೇಯಸ್ಸು ಪೊಲೀಸ್ ಇಲಾಖೆಗೆ ಸಲ್ಲಬೇಕು ಎಂದರು.

ಪರಿಶಿಷ್ಟ ಜಾತಿ ಮತ್ತು ವರ್ಗದವರ ಮೇಲಿನ ದೌರ್ಜನ್ಯಗಳನ್ನು ಇನ್ನಷ್ಟು ಪರಿಣಾಕಾರಿಯಾಗಿ ತಡೆಯುವ ಕೆಲಸ ಆಗಬೇಕಿದೆ ಎಂದು ಅವರು ಹೇಳಿದರು.ಪರಿಶಿಷ್ಟ ಜಾತಿ, ಪಂಗಡಗಳ ದೌರ್ಜನ್ಯ ತಡೆಗೆ ಡಿಸಿಆರ್‌ಇ ಪೊಲೀಸ್ ಠಾಣೆಗಳನ್ನು ಕಾರ್ಯೋನ್ಮುಖಗೊಳಿಸಿದ್ದೇನೆ. ಸಾಂವಿಧಾನಿಕ ಹಕ್ಕು ಮತ್ತು ಮೌಲ್ಯಗಳನ್ನು ಕಾಪಾಡುವ ಕೆಲಸ ಆಗಬೇಕಿದೆ ಎಂದು ಅವರು ಹೇಳಿದರು.

ದೇಶದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವುದರಲ್ಲಿ ರಾಜ್ಯದ ಪೊಲೀಸ್ ಸಿಬ್ಬಂದಿ ಅಗ್ರಸ್ಥಾನದಲ್ಲಿದ್ದಾರೆ. ಕೋಮುಶಕ್ತಿಗಳು, ದುಷ್ಟಶಕ್ತಿಗಳ ನಿಗ್ರಹದಲ್ಲಿ ಪೊಲೀಸರ ಪಾತ್ರ ಬಹಳ ದೊಡ್ಡದು ಎಂದರು. ಸಂವಿಧಾನದಲ್ಲಿ ಜನರಿಗೆ ಇರುವ ಹಕ್ಕುಗಳ (2ನೇ ಪುಟಕ್ಕೆ)

## ಅ.23 ರಂದು ಕಿತ್ತೂರುರಾಣಿ ಚನ್ನಮ್ಮವನರ ಜಯಂತಿ ಆಚರಣೆ

**ಯುವ ಮಾರ್ಗ ಸುದ್ದಿ**



**ಮಾನ್ವಿ,ಅ.21–** ಪಟ್ಟಣದ ತಹಸೀಲ್ದಾರ್ ಕಚೇರಿ ಸಭಾಂಗಣದಲ್ಲಿ ನಡೆದ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಆಚರಣೆಯ ಪೂರ್ವಭಾವಿ ಸಭೆಯಲ್ಲಿ ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ ಸರ್ಕಾರವು ಸಮಾಜದಲ್ಲಿನ ಮಹಾನಿಯರ ಜೀವನ ಸಂದೇಶಗಳನ್ನು ಜನರಿಗೆ ತಿಳಿಸುವ ಉದ್ದೇಶದಿಂದ ಸಮುದಾಯಗಳ ಸಹಾಕರದೊಂದಿಗೆ ವಿವಿಧ ಮಹಾನಿಯರ ಜಯಂತಿಗಳನ್ನು ಆಚರಿಸಲಾಗುತ್ತಿದ್ದು ಅ.23 ರಂದು ಬೆಳಿಗ್ಗೆ 10ಕ್ಕೆ ನಮ್ಮ ನಾಡಿನ ಧೀರ ಮಹಿಳೆ ಹಾಗೂ ಹೋರಾಟಗಾರ್ತಿ ಕಿತ್ತೂರು ರಾಣಿ ಚನ್ನಮ್ಮವನರ ಜಯಂತಿಯನ್ನು ಅರ್ಥಪೂರ್ಣವಾಗಿ ತಾಲೂಕು ಆಡಳಿತ ಹಾಗೂ ಸಮುದಾಯದವರೊಂದಿಗೆ ಆಚರಿಸಲಾಗುವುದು ತಾಲೂಕಿನ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬೆಳಿಗ್ಗೆ ತಮ್ಮ ಕಚೇರಿಯಲ್ಲಿ ಕಿತ್ತೂರು ರಾಣಿ ಚನ್ನಮ್ಮವನರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ತಹಸೀಲ್ದಾರ್ ಕಚೇರಿಯಲ್ಲಿ ನಡೆಯುವ ಜಯಂತಿ ಕಾರ್ಯಕ್ರಮದಲ್ಲಿ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಬೇಕು . ಕಿತ್ತೂರು ರಾಣಿ ಚನ್ನಮ್ಮವನರ ಜೀವನ ಹಾಗೂ ಸಾಧನೆ,ಹೋರಾಟಗಳ ಬಗ್ಗೆ ಉಪನ್ಯಾಸಕರಿಂದ ವಿಶೇಷ ಉಪನ್ಯಾಸ ಕಾರ್ಯಕ್ರಮ, ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭ ಪುರಸ್ಕಾರ ನೀಡಿ ಗೌರವಿಸಲಾಗುವುದು ಹಾಗೂ ಸಮುದಾಯದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ ತಾಲೂಕು ಆಡಳಿತವತಿಯಿಂದ ಸನ್ಮಾನಿಸಿ ಗೌರವಿಸಲಾಗುವುದು. ಎಂದು ತಿಳಿಸಿದರು.

ಸಭೆಯಲ್ಲಿ ತಾಲೂಕು ಆರೋಗ್ಯಧಿಕಾರಿ ಡಾ.ಶರಣಬಸವರಾಜ, ತಾಲೂಕು ವೀರಶೈವ,ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹಾರಪಾಟೀಲ್, ಗೌ.ಅಧ್ಯಕ್ಷರಾದ ಶ್ರೀಧರಸ್ವಾಮಿ, ಹಿರಿಯ ವಕೀಲರಾದ ಎ.ಬಿ.ಉಪ್ಪಳಮಠ, ಗಣೇಕಲ್ ಮಲ್ಲನಗೌಡ, ಶ್ರೀಕಾಂತಗೂಳಿ, ವೀರನಗೌಡವಕೀಲರು, ಎಸ್.ಎಸ್.ಪಾಟೀಲ್, ಮಂಜುನಾಥಗೌಡ, ಶಂಕ್ರಪ್ಪ ನಕ್ಕುಂದಿ.ಸೇರಿದಂತೆ ಇನ್ನಿತರರು ಇದ್ದರು.



## ಮೊದಲನೇಯ ಪುಟದಿಂದ

# ಶಾಂತಿ, ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸರ ಸೇವೆ ಸ್ಮರಣೀಯ: ಜಿಲ್ಲಾಧಿಕಾರಿ ನಿತೀಶ್ ಕೆ.

ಹುತಾತ್ಮರಿಗೆ ಗೌರವ: ಜಿಲ್ಲಾ ಪೊಲೀಸ್ ಮುಖ್ಯಾಲಯದ ಆವರಣದಲ್ಲಿ ನಡೆದ ಹುತಾತ್ಮರ ಸ್ಮಾರಕದ ಬಳಿಯಲ್ಲಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಜಿ.ಹರೀಶ್ ಅವರು ಹುತಾತ್ಮರಿಗೆ ಗೌರವ ವಂದನೆ ಸಲ್ಲಿಸಿದರು.ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಪೊಲೀಸ್ ಹುತಾತ್ಮರ ಸ್ಮಾರಕಕ್ಕೆ ಅತಿಥಿಗಳು ಪುಷ್ಪಗುಚ್ಛವಿರಿಸಿ ಶ್ರದ್ಧಾಂಜಲಿ ಸಲ್ಲಿಸಿದರು.

ಪೊಲೀಸ್ ಬ್ಯಾಂಡ್‌ನವರು ಶೋಕಗೀತೆ ನುಡಿಸಿದರು. ನಂತರ ಪೊಲೀಸ್ ಶಸ್ತ್ರಪಡೆಯ ಸಿಬ್ಬಂದಿ ಮೂರು ಸುತ್ತು ಗಾಳಿಯಲ್ಲಿ ಗುಂಡು ಹಾರಿಸಿ ಪೊಲೀಸ್ ಹುತಾತ್ಮರಿಗೆ ಗೌರವ ಸಲ್ಲಿಸಿದರು. ಪೊಲೀಸ್ ಧ್ವಜ ಅರ್ಧಕ್ಕೆ ಇಳಿಸಿ ಎರಡು ನಿಮಿಷ ಮೌನ ಆಚರಿಸಲಾಯಿತು.

ಇದೇ ಸಂದರ್ಭದಲ್ಲಿ ಸರ್ಕಾರಿ ನೌಕಕರ ಸಂಘದ ಜಿಲ್ಲಾಧ್ಯಕ್ಷರಾದಕೃಷ್ಣ ಶಾವಂತಗೇರಿ, ವಿವಿಧ ಸಂಘಟನೆಗಳ ಮುಖಂಡರು ಹಾಗೂ ಪೊಲೀಸ್ ಇಲಾಖೆಯ ವಿವಿಧ ಅಧಿಕಾರಿ, ಸಿಬ್ಬಂದಿ ಇದ್ದರು.

# ಅ.29 ರಿಂದ ಕರೆಗುಡ್ಡ ಶ್ರೀ ಮಹಾಂತೇಶ್ವರ ಮಠದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು: ಶ್ರೀ.ನೀರಂಜನದೇವರು

ನ.7 ರಂದು ಬೆಳಿಗ್ಗೆ 9ರಿಂದ ಶ್ರೀಮಠದ ನೂತನ ಗೋಪುರಗಳ ಲೋಕಾರ್ಪಣೆ ಮತ್ತು ಐದುಸಾವಿರದ ಒಂದು ಸುಮಂಗಲಿಯರಿಗೆ ಉಡಿತುಂ ಬುವ ಕಾರ್ಯಕ್ರಮ ,ಸಂಗೀತ ಗೋಷ್ಠಿ, ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ದೀಪೋತ್ಸವ ನ.8ರಂದು ಜಂಗಮವಟು ಗಳಿಗೆ ಅಯ್ಯಾಚಾರ,ರಥಕ್ಕೆ ಕಳಸಾರೋ ಹಣ ಸಂಜೆ 5 ಕ್ಕೆ

ಗಜಲಕ್ಷ್ಮೀಯ ಮೇಲೆ ಅಂಬಾರಿ ಮೆರವಣಿಗೆ ರಥೋತ್ಸವ ಶ್ರೀಮಠದ ಶ್ರೀ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳಿಗೆ ಗುರುವಂದನೆ ಹಾಗೂ ಬೆಳ್ಳಿಯಿಂದ ತುಲಾಭಾರ ಕಾರ್ಯಕ್ರಮ ಸೇರಿದಂತೆ ವಿವಿಧ ಕಾರ್ಯಕ್ರಮಗಳು ನಡೆಯಲಿದ್ದು ಶ್ರೀ ಮಠದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಿದರು.

ದರೂರು ಮಠದ ಶ್ರೀ ಕೊಟ್ಟೂರುಸ್ವಾಮಿಗಳು,ಹೊಸಪೇಟೆಯ ಶ್ರೀ ಚಂದ್ರಶೇಖರ ಗುರುಗಳು,ಕರೆಗುಡ್ಡ ಶ್ರೀ ಮಹಾಂತೇಶ್ವರ ಮಠದ ಕಿರಿಯ ಶ್ರೀಗಳಾದ ಸಂಗನಬಸವ ದೇವರು ,ತಾ.ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹಾರಪಾಟೀಲ್, ಮುಖಂಡರಾದ ತಿಮ್ಮರೆಡ್ಡಿ ಭೋಗವಾತಿ, ಮಲ್ಲನಗೌಡ ನಕ್ಕುಂದಿ,ಶಿವಯ್ಯಸ್ವಾಮಿ,ಗಣೇಕಲ್ ಮಲ್ಲನಗೌಡ, ಶರಣೆಗೌಡ ನಕ್ಕುಂದಿ , ಮೌನೇಶಗೌಡ.ಹೆಚ್.ಶಿವಯ್ಯಸ್ವಾಮಿ ಗವಿಗಟ್, ಸಿದ್ದರಾಮಯ್ಯಸ್ವಾಮಿ, ಚಂದ್ರಶೇಖರ ಕೋಟ್ನೆಕಲ್ ,ಮಹಾಂತೇಶ್ ಗವಿಗಟ್, ರಾಜಶೇಖರಯ್ಯಸ್ವಾಮಿ,ಶ್ರೀಕಾಂಗೂಳಿ, ಸುರೇಶ ನಾಡಗೌಡ,ಅಮರೇಶ ಗವಾಯಿ, ಸೇರಿದಂತೆ ಇನ್ನಿತರರು ಇದ್ದರು.

# ಅನೈತಿಕ ಪೊಲೀಸ್‌ಗಿರಿಗೆ ಅಂಕುಶ

ರಕ್ಷಣೆಯ ಜವಾಬ್ದಾರಿ ಪೊಲೀಸ್ ಇಲಾಖೆಯದ್ದು. ಈ ನಿಟ್ಟಿನಲ್ಲಿ ರಾಜ್ಯ ಪೊಲೀಸರು ಉತ್ತಮವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ರಾಜ್ಯದಲ್ಲಿ ಈ ವರ್ಷ ರಾಜ್ಯ ಸೇರಿದಂತೆ ದೇಶದಲ್ಲಿ 191 ಮಂದಿ ಪೊಲೀಸರು ಕರ್ತವ್ಯ ನಿರ್ವಹಣೆ ಮಾಡುವಾಗ ಹುತಾತ್ಮರಾಗಿದ್ದಾರೆ. ಇವರ ತ್ಯಾಗ, ಬಲಿದಾನಕ್ಕೆ ಬೆಲೆ ಕಟ್ಟಲಾಗದು. ಇವರ ಸೇವೆಯನ್ನು ಸ್ಮರಿಸಿ ವಂದಿಸುವುದು ಪ್ರತಿಯೊಬ್ಬ ನಾಗರಿಕರ ಕರ್ತವ್ಯ ಎಂದರು.ಅನುಕಂಪದ ಹುದ್ದೆ–ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುವಾಗ ಮೃತಪಟ್ಟ ಪೊಲೀಸರ ಕುಟುಂಬಗಳಲ್ಲಿ 116 ಮಂದಿಗೆ ಅನುಕಂಪದ ಕೆಲಸ ನೀಡಿ ಸರ್ಕಾರ ಆದೇಶ ಹೊರಡಿಸಿದೆ ಎಂದು ತಿಳಿಸಿದರು.

ನಿವೃತ್ತ ಪೊಲೀಸರ ಆರೋಗ್ಯ ಯೋಜನೆಯ ವೈದ್ಯಕೀಯ ಮರು ಪಾವತಿ ವೆಚ್ಚವನ್ನು ವಾರ್ಷಿಕ 1 ಲಕ್ಷದಿಂದ 1.50 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗಿದೆ. ಹಾಗೆಯೇ ಎಲ್ಲ ಪೊಲೀಸ್ ಸಿಬ್ಬಂದಿಯ ಆರೋಗ್ಯ ತಪಾಸಣಾ ವೆಚ್ಚವನ್ನು 1 ಸಾವಿರದಿಂದ 1500 ರೂ.ಗಳಿಗೆ ಏರಿಕೆ ಮಾಡಲಾಗಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯದ ಗೃಹ ಸಚಿವ ಡಾ. ಜಿ. ಪರಮೇಶ್ವರ್, ಪೊಲೀಸ್ ಮಹಾನಿರ್ದೇಶಕ ಎಂ.ಎ. ಸಲೀಂ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

# ಹೊನ್ನಿಕೇರಿ ಶ್ರೀಸಿದ್ಧೇಶ್ವರ ದೇವಸ್ಥಾನದಲ್ಲಿ ನೂತನ ಗೋಪುರದ ಕಳಸಾರೋಹಣ, ಲಕ್ಷ ದೀಪೋತ್ಸವ



**ಬೀದರ:ಅ.21–**ಹಲವು ವಿಸ್ಮಯಗಳನ್ನು ಒಡಲಲ್ಲಿ ಇಟ್ಟು ಕೊಂಡಿರುವ ಹೊನ್ನಿಕೇರಿ ಸಿದ್ದೇಶ್ವರ ದೇವಾಲಯವು ಬೀದರ್ ಜಿಲ್ಲೆಯ, ಬೀದರ್ ತಾಲೂಕಿನ ಹೊನ್ನಿಕೇರಿ ಗ್ರಾಮದಲ್ಲಿ ಬೆಟ್ಟದ ಮೇಲೆ ನೆಲೆಗೊಂಡಿರುವ ಒಂದು ಶತಮಾನದಷ್ಟು ಹಳೆಯ ಸುಪ್ರಸಿದ್ಧ ದೇವಾಲಯವಾಗಿದೆ. ಈ ದೇವಾಲಯಕ್ಕೆ ನಮ್ಮ ರಾಜ್ಯ ಸೇರಿ ಆಂಧ್ರ ಪ್ರದೇಶ, ಮಹಾರಾಷ್ಟ್ರ, ತೆಲಂಗಾಣ ರಾಜ್ಯಗಳಿಂದಲೂ ಭಕ್ತರನ್ನು ಆಕರ್ಷಿಸುತ್ತದೆ ದೇವಸ್ಥಾನದ ಅಭಿವೃದ್ಧಿಗಾಗಿ ನಾವೆಲ್ಲರೂ ಹಗಲಿರುಳು ಶ್ರಮಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಸುಪ್ರಸಿದ್ಧ ಶ್ರೀ ಹೊನ್ನಿಕೇರಿ ಸಿದ್ದೇಶ್ವರ ದೇವಸ್ಥಾನದಲ್ಲಿ ನವೆಂಬರ್ 10, 11 ಮತ್ತು 12ರಂದು ನಡೆಯಲಿರುವ ನೂತನ ಗೋಪುರದ ಕಳಸಾರೋಹಣ ಹಾಗೂ ಲಕ್ಷ ದೀಪೋತ್ಸವ, ವಿಶ್ವ ಕಲ್ಯಾಣ ಲೋಕ ಕಲ್ಯಾಣ, ಗ್ರಾಮ ಕಲ್ಯಾಣ ವಿಶೇಷ ಪೂಜೆ ಕಾರ್ಯಕ್ರಮದ ಪೂರ್ವಭಾವಿ ಸಿದ್ದತೆ ಪ್ರಯುಕ್ತ ಇಲಾಖೆಗಳ ಅಧಿಕಾರಿಗಳೊಂದಿಗೆ ದೇವಸ್ಥಾನದ ಆವರಣದಲ್ಲಿ ಸಭೆ ನಡೆಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಶ್ರೀಮದ್ ರಂಭಾಪುರಿ ವೀರಸಿಂಹಾಸನಾಧೀಶ್ವರ ಶ್ರೀಶ್ರೀಶ್ರೀ 10008 ಜಗದ್ಗುರುಗಳವರ ದಿವ್ಯ ಸಾನಿಧ್ಯದಲ್ಲಿ ನಡೆಯಲಿರುವ ಈ ಭವ್ಯ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಯೋಜಿಸಲು ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಂಡು ಭಕ್ತರಿಗೆ ಯಾವುದೇ ರೀತಿಯ ಅನಾನುಕೂಲ ಉಂಟಾಗದಂತೆ ಎಲ್ಲಾ ವ್ಯವಸ್ಥೆಗಳನ್ನು ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಗ್ರಾಮಸ್ಥರು ಸಹ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಹೊನ್ನಿಕೇರಿ ಗ್ರಾಮದ ಬೆಟ್ಟದ ನಡುವೆ ಇರುವ ಶ್ರೀ ಕ್ಷೇತ್ರ ಹೊನ್ನಿಕೇರಿ ಸಿದ್ದೇಶ್ವರ ದೇಗುಲ. ಶತಮಾನದಷ್ಟು ಪುರಾತನವಾದ ಈ ದೇವಾಲಯ, ಹಲವು ವಿಭಿನ್ನ ವಿಸ್ಮಯಗಳನ್ನು ತನ್ನೊಡಲಲ್ಲಿ ಇಟ್ಟುಕೊಂಡಿದೆ. ಬೀದರ್ ಜಿಲ್ಲೆಯ ಧಾರ್ಮಿಕ ಕೇಂದ್ರಗಳಲ್ಲಿ ಒಂದಾಗಿರುವ ಈ ದೇಗುಲಕ್ಕೆ ನಮ್ಮ ರಾಜ್ಯ ಸೇರಿ ಆಂಧ್ರ ಪ್ರದೇಶ, ಮಹಾರಾಷ್ಟ್ರ, ತೆಲಂಗಾಣ ಅನೇಕ ರಾಜ್ಯಗಳಿಂದ ಭಕ್ತರ ದಂಡು ಹರಿದು ಬರುತ್ತದೆ.

ದೇಗುಲದ ಸುತ್ತ ನೀರಿನ ಹೊಂಡಗಳು ಇದ್ದು, ನೀರು ಕುಡಿದರೆ ದೇವರ ಆಶೀರ್ವಾದ ದೊರೆಯುತ್ತದೆ ಎನ್ನುವುದು ಭಕ್ತರ ನಂಬಿಕೆಯಾಗಿದೆ. ಪ್ರತಿ ಅಮಾವಾಸ್ಯೆ, ಹುಣ್ಣಿಮೆ ಕೂಡಾ ಸಾವಿರಾರು ಭಕ್ತರು ಇಲ್ಲಿಗೆ ಬಂದು ತಮ್ಮಗೆ ಬರುವ ಭಕ್ತರು ದೇವರಿಗೆ ಹರಕೆ ರೂಪದಲ್ಲಿ ಪ್ರತಿಯೊಂದು ಮೆಟ್ಟಿಲಿಗೆ ದೀಪ ಹಚ್ಚಿ ತೆಂಗಿನಕಾಯಿ ಒಡೆದು ದೇವರಿಗೆ ಪೂಜೆ ಸಲ್ಲಿಸುವುದು ವಿಶೇಷ.


ಇಲ್ಲಿನಿತ್ಯ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಇಲ್ಲಿಗೆ ಬಂದು ಹರಕೆ ತಿರಿಸಿ ದೇವರ ದರ್ಶನ ಪಡೆದುಕೊಂಡು ಹೋಗುತ್ತಾರೆ. ದೇವಸ್ಥಾನಕ್ಕೆ ಬರುವ ಭಕ್ತರಿಗೆ ಉತ್ತಮ ಮೂಲ ಸೌಕರ್ಯ ಕಲ್ಪಿಸಬೇಕು. ಮುಜರಾಯಿ ಇಲಾಖೆಯ ಸುಪರ್ದಿಗೆ ಬರುವ ಈ ದೇವಸ್ಥಾನಕ್ಕೆ ಕೊಟ್ಯಾಂತರ ರೂಪಾಯಿ ಹಣ ಹರಿದುಬರುತ್ತದೆ ಅದರಿಂದ ಇನ್ನಷ್ಟು ಅಭಿವೃದ್ಧಿ ಪಡಿಸಲಾಗುವುದು.

ದೇವಸ್ಥಾನಕ್ಕೆ ಬರುವ ಸಾವಿರಾರು ಭಕ್ತರಿಗಾಗಿ ಯಾತ್ರಿ ನಿವಾಸ ಗುದ್ದಲಿ ಪೂಜೆ ನೆರವೇರಿಸಲಾಗಿದೆ ಇನ್ನೇನೂ ಕಾಮಗಾರಿ ಪ್ರಾರಂಭಿಸಲಾಗುವುದು ನನ್ನ ಅನುದಾನದಲ್ಲಿ ಸಹ ವಿವಿಧ ಯೋಜನೆಗಳು ರೂಪಿಸಿ ಹೆಚ್ಚಿನ ಅಗತ್ಯ ಕಾಮಗಾರಿ ಕೈಗೊಂಡು ಅಭಿವೃದ್ಧಿ ಪಡಿಸಲಾಗುವುದು ಎಂದು ಹೇಳಿದರು.

ಸಭೆಯ ನಂತರ ಶಾಸಕರು ಅಧಿಕಾರಿಗಳು ಮತ್ತು ಗ್ರಾಮಸ್ಥರೊಂದಿಗೆ ಸೇರಿ ಕಾರ್ಯಕ್ರಮದ ಸ್ಥಳ ಪರಿಶೀಲನೆ ನಡೆಸಿದರು.

# ಅರಕೇರಾ ಶ್ರೀಸೂಗೂರೇಶ್ವರ ಕಾರ್ತಿಕೋತ್ಸವ ಪ್ರಾರಂಭ

**ಯುವ ಮಾರ್ಗ ಸುದ್ದಿ**



**ಅರಕೇರಾ,ಅ.21–**ಜಿಲ್ಲೆಯ ಇತಿಹಾಸ ಪ್ರಸಿದ್ಧ ಅರಕೇರಾ ಪಟ್ಟಣದಲ್ಲಿನ ಶ್ರೀಸೂಗೂರೇಶ್ವರ ದೇವಸ್ಥಾನದಲ್ಲಿ ಪ್ರತಿವರ್ಷದಂತೆ ಈ ವರ್ಷವುಕೂಡ ಕಾರ್ತೀಕ ಮಾಸ ಶುಕ್ಲಪಕ್ಷ ಇಂದಿನಿಂದ ಸಾಯಂಕಲಾ 6–30 ನಿಮಿಷಕ್ಕೆ ಕಾರ್ತಿಕೋತ್ಸವ ಪ್ರಾರಂಭವಾಗುವುದು.ಶ್ರೀ ಚಂದ್ರಶೇಖರಯ್ಯಸ್ವಾಮಿ ಹೀರೆಮಠ ಅರಕೇರಾ ಇವರ ಸಾನಿದ್ಯೆದಲ್ಲಿ ಜರುಗುವುದು.

ಶ್ರೀಚಂದ್ರಶೇಖರ ಶೆಟ್ಟಿಯವರ ಮನೆಯಿಂದ ಗ್ರಾಮದಲ್ಲಿನ ದೇವಸ್ಥಾನಗಳಿಗೆ ತೆರಳಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸುವುದಕ್ಕಾಗಿ ಮಹಾಸೇವಕಾರ್ಯಕ್ರಮ ಜರುಗುವುದು ನಂತರ ಶ್ರೀಸೂಗೂರೇಶ್ವರ ದೇವಸ್ಥಾನದಲ್ಲಿ ಸಾಯಂಕಲಾ 5 ಜನ ಭಕ್ತರಿಂದ ಕಂಕಣ ಕಟ್ಟುವ ಮೂಲಕ ಕಾರ್ತಿಕೋತ್ಸವ ಪ್ರಾರಂಭವಾಗುವದು.

ಇಂದಿನಿಂದ ಸುಮಾರು 1 ತಿಂಗಳಕಾಲ ಸಾಯಂಕಲಾ 7ಗಂಟೆಯಿಂದ 8 ರವರಗೆ ಪಲ್ಲಕಿಸೇವೆ , ವಡುವು, ವಚನಗಳು.ಭಕ್ತರಿಂದ ನಂದಿಕೋಲಸೇವೆ. ನಡೆಯುವದು ಛೆಟ್ಟಿ ಅಮವ್ಯಾಸೆಯಾದ 5ದಿವಸದಿಂದ ಜಾತ್ರೆ ಪ್ರಾರಂಭವಾಗುವುದು.

# ಒಂದು ವಾರದೊಳಗೆ ಬೆಂಗಳೂರಿನ ರಸ್ತೆಗುಂಡಿಗಳನ್ನು ಮುಚ್ಚಲು ಸಿಎಂ ಸೂಚನೆ



ವಾರದೊಳಗಾಗಿ ಮುಚ್ಚಬೇಕು. ಎಲ್ಲಾ ರಸ್ತೆಗಳಿಗೂ ಒಂದು ಪದರದ ಟಾರ್ ಹಾಕುವಂತೆ ಸೂಚನೆ ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಗಾಂಧಿನಗರ ವಿಧಾನಸಭಾ ಕ್ಷೇತ್ರದ ಬಿ.ವಿ.ಕೆ. ಅಯ್ಯಂಗಾರ್ ರಸ್ತೆ, ಆರ್.ಟಿ. ಸ್ಟ್ರೀಟ್, ಚಿಕ್ಕಪೇಟೆ, ಬಳೆಪೇಟೆ, ಗಾಂಧಿನಗರ ಭಾಗದಲ್ಲಿ ವೈಟ್ ಟಾಪಿಂಗ್ ಮತ್ತು ಸಮಗ್ರ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಬೆಂಗಳೂರಿನ ಅಭಿವೃದ್ಧಿಗೆ 1.20 ಲಕ್ಷ ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗುತ್ತಿದೆ. ಕೇಂದ್ರದಿಂದ ಒಂದು ರೂ.ಕೂಡ ನೆರವು ಸಿಗುತ್ತಿಲ್ಲ. ನಾಗರಿಕರು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಇನ್ನೊಂದು ವಾರದಲ್ಲಿ ಬೆಂಗಳೂರಿನ ರಸ್ತೆ ಗುಂಡಿಗಳನ್ನು ಮುಚ್ಚಲೇ ಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಈ ಬಾರಿ ಮಳೆ ಹೆಚ್ಚಾಗಿ ಬಂದಿದ್ದದರಿಂದಾಗಿ ಗುಂಡಿಗಳನ್ನು ಮುಚ್ಚಲು ಕಷ್ಟವಾಗುತ್ತಿದೆ. ವೈಟ್ ಟಾಪಿಂಗ್ ಕಾಮಗಾರಿ ಇದಕ್ಕೆ ಪರಿಹಾರವಾಗಿದೆ. ಸದ್ಯಕ್ಕೆ ರಸ್ತೆಗಳಿಗೆ ಒಂದು ಪದರದ ಟಾರ್ ಹಾಕುವಂತೆ ಜಿಬಿಎ ಮುಖ್ಯ ಆಯುಕ್ತರಿಗೆ ಸೂಚನೆ ನೀಡಿದ್ದೇನೆ ಎಂದರು.

ಈ ಬಾರಿ ಎಲ್ಲಾ ಶಾಸಕರಿಗೂ ಹಣ ನೀಡಲು ಬಜೆಟ್‌ನಲ್ಲಿ 8 ಸಾವಿರ ಕೋಟಿ ರೂ.ಗಳನ್ನು ಕಾಯ್ದಿರಿಸಿಕೊಂಡಿದ್ದಾಗಿ ಹೇಳಿದ ಅವರು, ಗ್ರಾಮೀಣ ಹಾಗೂ ನಗರ ಪ್ರದೇಶದ ಶಾಸಕರ ಜೊತೆಗೆ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಶಾಸಕರ ಕ್ಷೇತ್ರಗಳಿಗೂ ಹಣ ನೀಡಲಾಗುತ್ತದೆ. ಈ ಮೂಲಕ ಸಮಾನ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು ಎಂದರು.

ರಸ್ತೆ ಗುಂಡಿಗಳನ್ನು ಮುಚ್ಚಿಲ್ಲ ಎಂದು ಬಿಜೆಪಿಯವರು ಟೀಕೆ ಮಾಡುತ್ತಾರೆ. ಅವರ ಕಾಲದಲ್ಲಿ ಗುಂಡಿಗಳಿರಲಿಲ್ಲವೇ ಎಂದು ಕಿಡಿಕಾರಿದ ಮುಖ್ಯಮಂತ್ರಿ ಅವರು, ಹಿಂದೆ ನಾವು ಮಾಡಿದ ರಸ್ತೆಗಳನ್ನು ಹೊರತು ಪಡಿಸಿದರೆ ಬಿಜೆಪಿಯವರ ಯೋಗ್ಯತೆಗೆ ಆಡಳಿತ ನಡೆಸಿದಾಗ ಒಂದು ಹಿಡಿ ಮಣ್ಣು ಹಾಕಿರಲಿಲ್ಲ. ಜೊತೆಗೆ ಹಣ ಇಲ್ಲದೇ ಇದ್ದರೂ 2.10 ಲಕ್ಷ ರೂ. ವೆಚ್ಚದ ಯೋಜನೆಗಳಿಗೆ ಮಂಜೂರಾತಿ ನೀಡಿದ್ದರು. ಅದೆಲ್ಲಾ ಬಾರವೂ ನಮ ಮೇಲೆ ಬಿದ್ದಿದೆ ಎಂದು ಸಿದ್ದರಾಮಯ್ಯ ಹೇಳಿದರು.

ಈ ಸಾಲದ ಹೊರೆಯ ಜೊತೆಗೆ ನಾವು ಗ್ಯಾರಂಟಿ ಯೋಜನೆಗಳನ್ನು ಪ್ರಾಮಾಣಿಕವಾಗಿ ಜಾರಿಗೆ ತಂದಿದ್ದೇವೆ. ಗ್ಯಾರಂಟಿಗಳು ಜಾರಿಯಾಗುವುದಿಲ್ಲ ಎಂದು ಅಹಹಾಸ್ಯ ಮಾಡಿದ್ದ ವಿರೋಧ ಪಕ್ಷಗಳಿಗೆ ತಕ್ಕ ಉತ್ತರ ನೀಡಿದ್ದೇವೆ. ಒಂದು ಲಕ್ಷ ಕೋಟಿ. ರೂ.ಗಳನ್ನು ಗ್ಯಾರಂಟಿಗಳಿಗಾಗಿಯೇ ಬಳಸಿದ್ದೇವೆ ಎಂದು ಹೇಳಿದರು.

**ಆರ್‌ಎಸ್‌ಎಸ್ ಹೇಳಿದಂತೆ ಮಾತನಾಡುವ ಬಿಜೆಪಿ ನಾಯಕರು:**

ಸರ್ಕಾರದ ಬಳಿ ದುಡ್ಡಿಲ್ಲ ಎಂದು ಬಿಜೆಪಿ ಎಲ್ಲಾ ನಾಯಕರು ಆರ್‌ಎಸ್‌ಎಸ್ ಹೇಳಿ ಕೊಟ್ಟ ಗಿಳಿ ಪಾಠವನ್ನು ಒಪ್ಪಿಸುತ್ತಿದ್ದಾರೆ. ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸ್ವತಂತ್ರವಾಗಿ ಏನನ್ನೂ ಮಾತನಾಡುವುದಿಲ್ಲ, ವಿಧಾನಸಭೆಯಲ್ಲಿ ನಾನು ಒಮೆ ಅಶೋಕ್ ಅವರ ಜೊತೆ ಚರ್ಚೆ ಮಾಡಿದ್ದಾಗ, ನಾವು ಆರ್‌ಎಸ್‌ಎಸ್‌ನವರು ಹೇಳಿಕೊಟ್ಟಂತೆ ಹೇಳದಿದ್ದರೆ ನಮನ್ನು ಉಳಿಸುವುದಿಲ್ಲ. ಇಲ್ಲಿ ಒಬ್ಬ ಆರ್‌ಎಸ್‌ಎಸ್‌ಗೆ ಸೇರಿದ ವ್ಯಕ್ತಿ ಕುಳಿತಿರುತ್ತಾರೆ. ನಮನ್ನು ಗಮನಿಸುತ್ತಾರೆ ಎಂದು ಅಳಲು ತೋಡಿಕೊಂಡರು ಎಂದು ಮುಖ್ಯಮಂತ್ರಿ ಹೇಳಿದರು.

ಕಾಣುತ್ತಾರೋ ಅವರಿಗೆ ಕರ್ನಾಟಕದ ಬಗ್ಗೆ ಅಷ್ಟೆ? ದ್ವೇಷವಿದೆ. ಆದ್ದರಿಂದ ಹಣಕಾಸು ಆಯೋಗದ ಪ್ರಕಾರ ಕರ್ನಾಟಕಕ್ಕೆ 11495 ಕೋಟಿ. ರೂ.ಗಳು ಬರಬೇಕಿತ್ತು. ಭದ್ರಾ ಮೇಲ್ದಂಡೆ ಯೋಜನೆಗೆ 5300 ಕೋಟಿ ರೂ.ಗಳನ್ನು ನೀಡುವುದಾಗಿ ಕೆಂದ್ರ ಹಣಕಾಸು ಸಚಿವೆ ನಿರ್ಮಲಾಸೀತಾರಾಮನ್ ಬಜೆಟ್‌ನಲ್ಲಿ ಘೋಷಿಸಿದರು. ಅದರಲ್ಲಿ ಒಂದು ರೂ. ಕೊಟ್ಟಿಲ್ಲ. ಮೋದಿ ಮುಖ ನೋಡಿ ಸಂಸತ್ ಚುನಾವಣೆಯಲ್ಲಿ ಜನ ಮತ ಹಾಕಿದ್ದರು. ಆಯ್ಕೆಯಾದ ಸಂಸದರು ರಾಜ್ಯದ ಪರವಾಗಿ ಒಂದೂ ದಿನವೂ ಧ್ವನಿ ಎತ್ತಿಲ್ಲ. ಸಂಸದರಾದ ತೇಜಸ್ವಿಸೂರ್ಯ, ಕೇಂದ್ರ ಸಚಿವರಾದ ಶೋಭಾ ಕರಂದ್ಲಾಜೆ, ಎಚ್.ಡಿ.ಕುಮಾರಸ್ವಾಮಿ ಒಂದು ದಿನವೂ ಕರ್ನಾಟಕದ ಪರವಾಗಿ ಮಾತನಾಡಿಲ್ಲ. ಇದನ್ನು ನೋಡಿದರೇ ನಿಮಗೆ ಸಿಟ್ಟು ಬರುವುದಿಲ್ಲವೇ? ರಾಜ್ಯಕ್ಕೆ ದ್ರೋಹ, ಅನ್ಯಾಯ ಮಾಡುತ್ತಿರುವ ಇವರನ್ನು ಚುನಾವಣೆಯಲ್ಲಿ ಸೋಲಿಸುವ ಕೆಲಸ ಮಾಡಿ. ನಿಮ ಧಮಯ್ಯ ಎಂದು ಮನವಿ ಮಾಡಿದರು.

ಜಿಎಸ್‌ಟಿ ವಸೂಲಿಗೆ ಆಕ್ರೋಶ:

8 ವರ್ಷದಿಂದ ಜಿಎಸ್ಟಿ ದುಬಾರಿ ತೆರಿಗೆ ವಸೂಲಿ ಮಾಡಿದ ಕೇಂದ್ರ ಸರ್ಕಾರ ಈಗ ಕಡಿಮೆ ಮಾಡಿ, ದೀಪಾವಳಿ ಕೊಡುಗೆ'ಯೆಂದು ಬಿಂಬಿಸಿಕೊಳ್ಳುತ್ತಿದೆ. ಇಷ್ಟು ವರ್ಷ ಜನರಿಂದ ದುಬಾರಿ ತೆರಿಗೆ ವಸೂಲಿ ಮಾಡಿದ ಬಗ್ಗೆ ಬಿಜೆಪಿ ಸರ್ಕಾರ ಯಾವ ರೀತಿಯ ಉತ್ತರ ನೀಡುತ್ತದೆ ಎಂದು ಪ್ರಶ್ನಿಸಿದರು.

ಈಗ ಬಿಜೆಪಿಯ ಎಲ್ಲಾ ಶಾಸಕರು ನರೇಂದ್ರ ಮೋದಿ ಅವರ ಫೋಟೋ ಹಾಕಿಸಿಕೊಂಡು ದೀಪಾವಳಿ ಗಿಫ್ಟ್ ಎನ್ನುತ್ತಿದ್ದಾರೆ. ಇದು ಸ್ವಿಕಾರಾರ್ಹವೇ ಎಂದು ಪ್ರಶ್ನಿಸಿದರು.

ಸಭೆಯಲ್ಲಿದ್ದ ನಾಗರಿಕರೊಬ್ಬರು ಮೋದಿ ಸರ್ಕಾರ ಜಿಎಸ್‌ಟಿ ಜೊತೆಗೆ ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ದರದಲ್ಲೂ ಜನರನ್ನು ಸುಲಿಗೆ ಮಾಡುತ್ತಿದೆ ಎಂದು ಆಕ್ಷೇಪಿಸಿದರು. ಇದನ್ನು ಬಿಜೆಪಿಯವರ ಬಳಿ ಕೇಳಿ ಎಂದು ಸಿದ್ದರಾಮಯ್ಯ ಹೇಳಿದರು.

ಅವರಿಗೆ ಜನರ ಕೂಗು ಕೇಳುವುದಿಲ್ಲ, ಕಿವಿ ಕಿವುಡಾಗಿದೆ ಎಂದು ನಾಗರಿಕರು ಪ್ರತಿಕ್ರಿಯಿಸಿದರು. ಹಾಗಿದ್ದ ಮೇಲೆ ಮೋದಿ ಮೋದಿ ಎಂದು ಘೋಷಣೆ ಕೂಗಿ ಚುನಾವಣೆಯಲ್ಲಿ ಮತ ಹಾಕುವುದೇಕೇ? ಎಂದು ಸಿದ್ದರಾಮಯ್ಯ ಹಂಗಿಸಿದರು.

ಗುಣಮಟ್ಟದ ಕಾಮಗಾರಿಗೆ ಸೂಚನೆ:

ಬೆಂಗಳೂರಿನಲ್ಲಿ ಹಳೆಯ ಗುತ್ತಿಗೆದಾರರಿದ್ದಾರೆ. ರಾಜಕಾರಣಿಗಳ ಜೊತೆ ಸೇರಿ ಕಳಪೆ ಕಾಮಗಾರಿಯಾಗುವ ಸಾಧ್ಯತೆಯಿದೆ. ಕಾರ್ಯಕರ್ತರು ಎಚ್ಚರದಿಂದಿರಬೇಕು. ವೈಟ್ ಟಾಪಿಂಗ್ ಕಾಮಗಾರಿಯ ಗುಣಮಟ್ಟದಲ್ಲಿ ರಾಜಿ ಇರಬಾರದು, ಕನಿಷ್ಠ 30 ವರ್ಷ ಊರ್ಜಿತವಾಗುವ ರಸ್ತೆ ನಿರ್ಮಾಣವಾಗಬೇಕು ಎಂದರು.

ಬೆಂಗಳೂರಿನ ವಿಸ್ತೀರ್ಣ ದೊಡ್ಡದಾಗಿರುವುದರಿಂದ ಇದನ್ನು ವಿಭಜಿಸಲು ಬಿಜೆಪಿಯ ಆಡಳಿತದಲ್ಲೆ ಆಲೋಚನೆ ನಡೆದಿತ್ತು. ನಾವು ಬೆಂಗಳೂರನ್ನು 5 ಪಾಲಿಕೆಗಳನ್ನಾಗಿ ಮಾಡಿದ್ದೇವೆ. ಜಿಬಿಎ ರಚನೆಯಾಗಿದ್ದು, ಆ ಪ್ರಾಧಿಕಾರಕ್ಕೆ ನಾನೇ ಅಧ್ಯಕ್ಷನಾಗಿದ್ದೇನೆ. ಉತ್ತಮ ಆಡಳಿತ ದೃಷ್ಟಿಯಿಂದ ವಿಭಜನೆ ಮಾಡಲಾಗಿದೆ ಎಂದು ಸಮರ್ಥಿಸಿಕೊಂಡರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗಾಂಧಿನಗರ ಕ್ಷೇತ್ರದ ಶಾಸಕರೂ ಆಗಿರುವ ಸಚಿವ ದಿನೇಶ್‌ಗುಂಡೂರಾವ್, ಯೋಜನಾ ಸಚಿವ ಡಿ.ಸುಧಾಕರ್, ಶಾಸಕರಾದ ಅಜಯ್‌ಸಿಂಗ್, ವೆಂಕಟೇಶ್, ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿ ತುಷಾರ್ ಗಿರಿನಾಥ್, ಜಿಬಿಎ ಮುಖ್ಯ ಆಯುಕ್ತ ಮಹೇಶ್‌ರಾವ್ ಮತ್ತು ಇತರರು ಇದ್ದರು.

# ಸಿಎಂ, ಡಿಕೆಶಿ ಜೊತೆ ಮುಜುಂದಾರ್ ಚರ್ಚೆ





**ಬೆಂಗಳೂರು, ಅ. 21–** ಬೆಂಗಳೂರಿನ ರಸ್ತೆಗಳ ದುಸ್ತಿತಿ ಬಗ್ಗೆ ಬಹಿರಂಗವಾಗಿಯೇ ಟೀಕೆ ಮಾಡಿದ್ದ ಉದ್ಯಮಿ ಕಿರಣ್ ಮುಜುಂದಾರ್ ಶಾ ಅವರು ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಬ್ಬರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ, ಚರ್ಚಿಸಿದರು.

ದೀಪಾವಳಿ ಹಬ್ಬದ ಶುಭಾಶಯ ಕೋರಲು ಉದ್ಯಮಿ ಕಿರಣ್ ಮುಜುಂದಾರ್ ಶಾ ಅವರು ಮೊದಲಿಗೆ ಡಿ.ಕೆ.ಶಿವಕುಮಾರ್ ಅವರು ಸದಾಶಿವನಗರದ ನಿವಾಸಕ್ಕೆ ತೆರಳಿ ಅವರಿಗೆ ದೀಪಾವಳಿ ಶುಭಾಶಯ ಹೇಳಿ ಸುಮಾರು ಹೊತ್ತು ಚರ್ಚೆ ನಡೆಸಿದರು.

ನಂತರ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರನ್ನು ಅವರ ಅಧಿಕೃತ ನಿವಾಸ ಕಾವೇರಿಯಲ್ಲಿ ಭೇಟಿ ಮಾಡಿದ್ದ ಅವರು ಮುಖ್ಯಮಂತ್ರಿಗಳಿಗೆ ದೀಪಾವಳಿ ಶುಭಾಶಯ ಕೋರಿದರು.

ಖ್ಯಾತ ಉದ್ಯಮಿ, ಬಯೋಕಾನ್ ಮುಖ್ಯಸ್ಥೆ ಕಿರಣ್ ಮಜುಂದಾರ್ ಷಾ ಅವರು ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರನ್ನು ಬೆಂಗಳೂರಿನಲ್ಲಿಂದು ಭೇಟಿ ಮಾಡಿ ಚರ್ಚಿಸಿದರು.

ಬೆಂಗಳೂರಿನ ರಸ್ತೆ ಗುಂಡಿಗಳ ಬಗ್ಗೆ ಬಹಿರಂಗವಾಗಿ ಟೀಕೆ ಮಾಡಿ ಸರ್ಕಾರ ಒಪ್ಪಿದರೆ ತಮ್ಮ ಸ್ವಂತ ದುಡ್ಡಿನಲ್ಲಿ ರಸ್ತೆಗಳನ್ನು ಸರಿಪಡಿಸುತ್ತೇನೆ ಎಂದು ಕಿರಣ್ ಮುಜುಂದಾರ್ ಶಾ ಹೇಳಿಕೆ ನೀಡಿದ್ದು ಚರ್ಚೆಗೆ ಗ್ರಾಸವಾಗಿ

ಐಟಿ–ಬಿಟಿ ಉದ್ಯಮಿಗಳು ಪದೇ ಪದೇ ಬೆಂಗಳೂರಿನ ಮೂಲ ಸೌಕರ್ಯದ ಬಗ್ಗೆ ಟೀಕೆ ಮಾಡುತ್ತಿರುವುದಕ್ಕೆ ಗರಂ ಆಗಿದ್ದ ಡಿ.ಕೆ.ಶಿವಕುಮಾರ್, ಬೆಂಗಳೂರಿನ ಸೌಲಭ್ಯವನ್ನು ಬಳಸಿಕೊಂಡು ಬೆಳೆದಿರುವವರು ಟೀಕೆ ಮಾಡುವುದನ್ನು ಬಿಡಲಿ ರಾಜ್ಯ ಸರ್ಕಾರ ರಸ್ತೆಗಳ ದುರಸ್ತಿಗೆ ಕ್ರಮ ವಹಿಸಿದೆ. ಮಳೆಗಾಲದಲ್ಲಿ ರಸ್ತೆಗಳಲ್ಲಿ ಗುಂಡಿಗಳಾಗುವುದು ಸಹಜ. ಎಲ್ಲ ರಸ್ತೆಗಳನ್ನು ದುರಸ್ತಿಗೊಳಿಸುವುದಾಗಿ ಹೇಳಿದ್ದರು.

ರಸ್ತೆ ಗುಂಡಿ ವಿಚಾರದಲ್ಲಿ ಸರ್ಕಾರ ಮತ್ತ ಉದ್ಯಮಿ ಕಿರಣ್ ಮುಜುಂದಾರ್ ಶಾ ಬಹಿರಂಗ ಜಟಾಪಟಿ ಸಾಕಷ್ಟು ಚರ್ಚೆಗೆ ಕಾರಣವಾಗಿತ್ತು.ಇದೆಲ್ಲದರ ನಡುವೆ ಕಿರಣ್ ಮುಜುಂದಾರ್ ಶಾ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಚರ್ಚೆ ನಡೆಸಿರುವುದು ನಾನಾ ವ್ಯಾಖ್ಯಾನಗಳಿಗೆ ಎಡೆ ಮಾಡಿಕೊಟ್ಟಿದೆ.

# ಬೆಂಗಳೂರು ಅಭಿವೃದ್ಧಿಗೆ ಒಂದು ಲಕ್ಷ 20 ಸಾವಿರ ಕೋಟಿ ರೂ– ಸಿಎಂ



**ಬೆಂಗಳೂರು, ಅ.21–** ವ್ಯವಸ್ಥಿತವಾಗಿ ಬೆಂಗಳೂರನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಮುಂದಾಗಿದ್ದು, ಬೆಂಗಳೂರಿನ ಅಭಿವೃದ್ಧಿಗೆ 1ಲಕ್ಷ 20 ಸಾವಿರ ಕೋಟಿ ರೂ.ಅನ್ನು ಒದಗಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಗಾಂಧಿನಗರ ವಿಧಾನಸಭಾ ಕ್ಷೇತ್ರದ ಚಿಕ್ಕಪೇಟೆಯ ಆಧುನೀಕರಣ ಮತ್ತು ಗಾಂಧಿನಗರ ಕ್ಷೇತ್ರದ ರಸ್ತೆಗಳ ವೈಟ್ ಟಾಪಿಂಗ್ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಹೊಸ ಹೊಸ ಹೊರವರ್ತುಲ ರಸ್ತೆ ಸುರಂಗ ಮಾರ್ಗ, ಫ್ಲೈಓವರ್, ಡಬಲ್‌ಡೆಕರ್ ರಸ್ತೆಗಳು ಸೇರಿ ಬೆಂಗಳೂರಿನ ಅಭಿವೃದ್ಧಿಗೆ 1 ಲಕ್ಷ 20 ಸಾವಿರ ಕೋಟಿ ನೀಡಿದ್ದೇವೆ ಎಂದರು.

ಬಿಜೆಪಿ ಅಧಿಕಾರಿದಲ್ಲಿದ್ದಾಗ ಒಂದೇ ಒಂದು ಹೊಸ ರಸ್ತೆ ನಿರ್ಮಿಸಲಿಲ್ಲ. ಒಂದೇ ಒಂದು ಗುಂಡಿ ಮುಚ್ಚಲಿಲ್ಲ. ಈಗ ಇರುವ ರಸ್ತೆಗಳೆಲ್ಲಾ ಕಾಂಗ್ರೆಸ್ ಕಾಲದಲ್ಲೇ ಆಗಿರುವಂತದ್ದು ಎಂದರು.

ಬೆಂಗಳೂರು ವಿಪರೀತವಾಗಿ ಬೆಳೆಯುತ್ತಿರುವ ನಗರ. ಈ ನಗರದ ಜನಸಂಖ್ಯೆ ಹೆಚ್ಚುತ್ತಿದ್ದು ಈ ಸವಾಲಿನ ಜೊತೆಗೆ ಬೆಂಗಳೂರಿನ ರಸ್ತೆಗಳ ಆಧುನೀಕರಣ ಮತ್ತು ಅಭಿವೃದ್ಧಿಗೆ ಹೇರಳವಾದ ಹಣ ಒದಗಿಸುತ್ತಿದ್ದೇವೆ ಎಂದರು.

ಬೆಂಗಳೂರಿನ ಮೆಟ್ರೋಗೆ ಶೇ.87 ರಷ್ಟು ಹಣ ಕೊಡುವುದು ನಾವೇ. ಅಂದರೆ ರಾಜ್ಯದ ಜನತೆಯ ಶೇ.87 ರಷ್ಟು ಹಣದಲ್ಲಿ ಮೆಟ್ರೋ ಆಗಿದೆ. ಆದರೆ ಬಿಜೆಪಿಯವರು ಮೆಟ್ರೋ ಕೇಂದ್ರದ ಯೋಜನೆ ಎಂದು ತಿರುಚಿ ಸುಳ್ಳು ಹೇಳುತ್ತಾರೆ ಎಂದರು.

ಆರ್‌ಎಸ್‌ಎಸ್ ಜಾರಿ ಮಾಡಿ 8 ವರ್ಷ ಇಡೀ ಭಾರತೀಯರ ಹಣ ಸುಲಿದಿದ್ದು ಇದೇ ಕೇಂದ್ರ ಸರ್ಕಾರ ಮತ್ತು ಇದೇ ನರೇಂದ್ರ ಮೋದಿ. ಎಂಟು ವರ್ಷ ಸುಲಿಗೆ ಮಾಡಿ ಈಗ ಮೋದಿ ಫೋಟೋ ಹಾಕಿ "ದೀಪಾವಳಿ ಗಿಫ್ಟ್" ಎಂದು ನಾಚಿಕೆ ಇಲ್ಲದೆ ಬೆನ್ನು ತಟ್ಟಿಕೊಳ್ಳುತ್ತಿದ್ದಾರೆ. ಇಂಥಾ ನಕಲಿಗಳಿಗೆ ನೀವು ಓಟು ಹಾಕಿ ಈಗ ಏಕೆ ತಲೆ ಮೇಲೆ ಕೈ ಹೊತ್ತುಕೊಳ್ತೀರಿ ಎಂದು ಸಾರ್ವಜನಿಕರಿಗೆ ಪ್ರಶ್ನಿಸಿದರು."ದೀಪಾವಳಿ ಗಿಫ್ಟ್" ಎಂದು ಜಾಹಿರಾತು ನೀಡಿರುವ ಮೋದಿ ಸರ್ಕಾರದ. ಜಿಎಸ್‌ಟಿ ಬದಲಾವಣೆಯಿಂದ ರಾಜ್ಯಕ್ಕೆ, ರಾಜ್ಯದ ಜನರಿಗೆ 15 ಸಾವಿರ ಕೋಟಿ ರೂಪಾಯಿ ನಷ್ಟವಾಗಿದೆ ಎಂದು ಲೆಕ್ಕ ಬಿಚ್ಚಿಟ್ಟರು.

ಮೋದಿ ಮೋದಿ ಅಂತೀರಲ್ಲ: ಅಮವಾಸ್ಯೆ ಸೂರ್ಯ ರಾಜ್ಯಕ್ಕೆ ಆಗುತ್ತಿರುವ ದ್ರೋಹ ಪ್ರಶ್ನಿಸಿದ್ದಾರಾ?

ಕ್ಷೇತ್ರದ ಸಂಸದ ಪಿ.ಸಿ.ಮೋಹನ್ ನಿಮ್ಮ ಪರವಾಗಿ ಪಾರ್ಲಿಮೆಂಟಿನಲ್ಲಿಬಾಯಿ ಬಿಟ್ಟಿದ್ದಾರಾ ಹೇಳಿ ಎಂದು ಸಿ.ಎಂ ಪ್ರಶ್ನಿಸಿದರು.ಸಂಸದ ತೇಜಸ್ವಿ ಸೂರ್ಯ. ನಾನು ಇವರನ್ನು ಅಮವಾಸ್ಯೆ ಸೂರ್ಯ ಅಂತ ಕರಿತೀನಿ. ರಾಜ್ಯದ ಆಗುತ್ತಿರುವ ಅನ್ಯಾಯ, ದ್ರೋಹದ ಬಗ್ಗೆ ಅಮವಾಸ್ಯೆ ಸೂರ್ಯ ಇವತ್ತಿನವರೆಗೆ ಬಾಯಿ ಬಿಟ್ಟಿದ್ದಾರಾ? ಸಚಿವರದ ಶೋಭಾ ಕರಂದ್ಲಾಜೆ, ಹೆಚ್.ಡಿ.ಕುಮಾರಸ್ವಾಮಿ ಅವರು ಮೋದಿ ಸರ್ಕಾರದಿಂದ ರಾಜ್ಯಕ್ಕೆ ಆಗುತ್ತಿರುವ ಮೋಸ, ದ್ರೋಹದ ಬಗ್ಗೆ ಒಂದೇ ಒಂದು ದಿನ ಬಾಯಿ ಬಿಟ್ಟಿದ್ದಾರಾ ? ಇಂಥವರನ್ನು ಗೆಲ್ಲಿಸಿ ನಿಮಗಾಗಲೀ, ರಾಜ್ಯಕ್ಕಾಗಲೀ, ಅವರು ಗೆದ್ದ ಪಾರ್ಲಿಮೆಂಟ್ ಕ್ಷೇತ್ರಕ್ಕಾಗಲೀ ಏನು ಸಿಕ್ಕಿದೆ ಹೇಳಿ ಎಂದು ಪ್ರಶ್ನಿಸಿದರು.

ದಿನೇಶ್ ಗುಂಡೂರಾವ್ ಕ್ಷೇತ್ರದ ಅಭಿವೃದ್ಧಿ ಬಗ್ಗೆ ಮಾತ್ರ ಶ್ರಮಿಸುವ ಜನಮುಖಿ ಶಾಸಕರು. ಇವರಿಗೆ ಉತ್ತಮ ಅವಕಾಶಗಳಿವೆ. ಮುಂದಿನ ಚುನಾವಣೆಯಲ್ಲಿ ಹೆಚ್ಚಿನ ಬಹುಮತದಿಂದ ಗೆಲ್ಲಿಸಲೇಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಕೆಂಪೇಗೌಡರ ಕಾಲದಲ್ಲಿ ಪೇಟೆ ಬೀದಿಯಾಗಿದ್ದ ಇಲ್ಲಿನ ಪೇಟೆಗಳು ಈಗಲೂ ಆ ಕಾಲದ ಸ್ವಭಾವವನ್ನೇ ಹೊಂದಿವೆ. ನಾವೊಮ್ಮೆ ಇಲ್ಲಿನ ರಸ್ತೆಗಳ ಅಗಲೀಕರಣದ ಬಗ್ಗೆ ಚಿಂತಿಸಿದ್ದೆವು. ಆದರೆ ದಿನೇಶ್ ಗುಂಡೂರಾವ್ ಅವರು ಒಪ್ಪಲಿಲ್ಲ. ನಮ್ಮ ಜನಗಳಿಗೆ ಸಮಸ್ಯೆ ಆಗತ್ತೆ ಸರ್ ಎಂದು ಸ್ಪಷ್ಟವಾಗಿ ನಿರಾಕರಿಸಿ, ರಸ್ತೆ ಅಗಲೀಕರಣ ಮಾಡದೆ, ರಸ್ತೆಗಳ ಆಧುನೀಕರಣ ಮತ್ತು ಚಿಕ್ಕಪೇಟೆಯ ಅಭಿವೃದ್ಧಿಗೆ ಯೋಜನೆ ರೂಪಿಸಿ ಜಾರಿ ಮಾಡಿದ್ದಾರೆ ಎಂದು ಶ್ಲಾಘಿಸಿದರು.

ಒಂದು ಲಕ್ಷದ 20 ಸಾವಿರ ಕೋಟಿ ವೆಚ್ಚದಲ್ಲಿ ಬೆಂಗಳೂರಿನ ಅಭಿವೃದ್ಧಿಗೆ ಮುಂದಾಗಿದ್ದೀವಿ. ಕೇಂದ್ರದಿಂದ ನಯ ಪೈಸೆ ಕೊಡುತ್ತಿಲ್ಲ ಎಂದು ವಿವರಿಸಿದರು.ಬಿಜೆಪಿ ಅಧಿಕಾರದಲ್ಲಿದ್ದಾಗ ಒಂದೇ ಒಂದು ಹೊಸ ರಸ್ತೆ ನಿರ್ಮಿಸಲಿಲ್ಲ. ಒಂದೇ ಒಂದು ರಸ್ತೆ ಗುಂಡಿ ಮುಚ್ಚಲಿಲ್ಲ. ಈಗ ಇರುವ ರಸ್ತೆಗಳೆಲ್ಲಾ ಕಾಂಗ್ರೆಸ್ ಸರ್ಕಾರದ ಕಾಲದಲ್ಲೇ ಆಗಿರುವಂಥವು ಎಂದರು.ಆರ್‌ಎಸ್ ಎಸ್‌ನವರು ನಮ್ಮನ್ನು ಬಿಡಲ್ಲ ಅಂತ ಆರ್.ಅಶೋಕ್ ಹೇಳ್ತಿದ್ದರುಬಿಜೆಪಿಯ ಆರ್.ಅಶೋಕ್, ವಿಜಯೇಂದ್ರ ಸೇರಿ ಯಾರದ್ದೂ ಸ್ವಂತ ಮಾತು ಇಲ್ಲ. ಆರ್ ಎಸ್‌ಎಸ್ ನವರು ಬರೆದುಕೊಟ್ಟಿದ್ದನ್ನು ಓದಿ ಹೋಗುವುದಷ್ಟೆ ಇವರ ಕೆಲಸ ಎಂದರು.

ವಿಧಾನಸಭಾ ಅಧಿವೇಶನ ವೇಳೆ ಒಮ್ಮೆ ಆರ್.ಅಶೋಕ್ ಗೆ ಕೇಳಿದ್ದೆ. ಆಗ ಆರ್.ಅಶೋಕ್ ಅವರು, "ಏನು ಮಾಡೋದು ಸರ್. ಖಖಖ ನವರು ಒಬ್ರು ಬಂದು ಕೂತಿರ್ತಾರೆ. ಅವರು ಹೇಳಿದ್ದನ್ನು ಹೇಳದೇ ಹೋದರೆ ನಮ್ಮನ್ನು ಬಿಡಲ್ಲ ಸಾರ್" ಎಂದು ಉತ್ತರಿಸಿದ್ದರು ಎಂದು ವಿವರಿಸಿದರು.ವಾರದಲ್ಲಿ ರಸ್ತೆಗುಂಡಿ ಮುಚ್ಚಿ–ಬೆಂಗಳೂರಿನ ರಸ್ತೆಗುಂಡಿಗಳನ್ನು ವಾರದಲ್ಲಿ ಮುಚ್ಚುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದರು.ಒಂದು ವಾರದಲ್ಲಿ ರಸ್ತೆ ಗುಂಡಿಗಳನ್ನೆಲ್ಲಾ ಮುಚ್ಚಿ ಒಂದು ಲೇಯರ್ ತಾರ್ ಹಾಕಬೇಕು ಎಂದು ಗ್ರೇಟರ್ ಬೆಂಗಳೂರು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರಿಗೆ ವೇದಿಕೆಯಿಂದಲೇ ಸೂಚನೆ ನೀಡಿದರು.

# ಶಿಕ್ಷಕರ ಕೊರತೆ ವ್ಯರ್ಥವಾದ ಕಂಪ್ಯೂಟರ್ ಬಳಕೆ



**ಸಂಡೂರು :ಅ:21–** ತಾಲೂಕಿನ ಚೋರನೂರು ಹೋಬಳಿಯ ಬಂಡ್ರಿ ಗ್ರಾಮದ ಬಳಿ ಇರುವ ಕೊಮಡಪುರದ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಹಲವಾರು ವರ್ಷಗಳಿಂದ ಖಾಯಂ ಶಿಕ್ಷಕರ ಕೊರತೆಯಿಂದ ಶಾಲೆಯಲ್ಲಿನ 6 ಕಂಪ್ಯೂಟರ್‌ಗಳು ಉಪಯೋಗಕ್ಕೆ ಬಾರದಂತಾಗಿದೆ. ಶಾಲೆಯಲ್ಲಿ 1 ರಿಂದ 6ನೇ ತರಗತಿಯ ವರೆಗೆ 150 ಮಕ್ಕಳಿದ್ದು, 150 ಮಕ್ಕಳು ಅಭ್ಯಾಸ ಮಾಡುತ್ತಿದ್ದು, ಒಬ್ಬರು ಮುಖ್ಯ ಶಿಕ್ಷಕರು 4 ಜನ ಅತಿಥಿ ಶಿಕ್ಷಕರು ಸೇವೆ ಸಲ್ಲಿಸಿ ಸೇವೆಯಲ್ಲಿ ಗಣಕ ಯಂತ್ರ ಶಿಕ್ಷಕ ಇತರೆ ಶಿಕ್ಷಕರು ಖಾಯಂ ಆಗಿ ಇಲ್ಲದೇ ಇರುವುದರಿಂದ ಲಕ್ಷಾಂತರ ವೆಚ್ಚ ಮಾಡಿದ ಗಣಕ ಯಂತ್ರಗಳು ವ್ಯರ್ಥವಾಗಿದ್ದು, ಮಕ್ಕಳ ಕಲಿಕೆ ಹಿನ್ನಡೆಯಾಗಿದೆ. ಶಾಲೆಯಲ್ಲಿ 6 ಗಣಕ ಯಂತ್ರಗಳನ್ನು ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಮಂಡಳಿಯ ಅನುದಾನ ಸೇರಿದಂತೆ ಸರ್ಕಾರದ ಇತರೆ ಅನುದಾನದಲ್ಲಿ ಗಣಕ ಯಂತ್ರಗಳನ್ನು ಖರೀದಿಸಲಾಗಿದ್ದು, ಮುಖ್ಯ ಶಿಕ್ಷಕರ ಕೊಠಡಿಯಲ್ಲಿ ಅಳವಡಿಸಲಾಗಿದೆ. ಗಣಕಯಂತ್ರ ಬಳಕೆ ಮಾಡಲು ಸೂಕ್ತವಾದ ಆಸನೆಗಳನ್ನು ಮಾಡದೇ ಇರುವುದರಿಂದ ಕಂಪ್ಯೂಟರ್ ಸೇವೆ ವ್ಯರ್ಥವಾಗಿದೆ.

ಗ್ರಾಮದಲ್ಲಿನ ಸರ್ಕಾರಿ ಶಾಲೆಗೆ ಹಲವಾರು ವರ್ಷಗಳಿಂದ ಖಾಯಂ ಶಿಕ್ಷಕರ ಕೊರತೆ ಇದ್ದು, ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಬಹಳ ತೊಂದರೆಯಾಗಿದೆ. ಸರ್ಕಾರವು ಕುಡಲೇ ಖಾಯಂ ಶಿಕ್ಷಕರನ್ನು ನೇಮಕ ಮಾಡಬೇಕು. ಗಣಕಯಂತ್ರವನ್ನು ಶಿಕ್ಷಕರು ಸೇರಿದಂತೆ ಇತರೆ ವಿಷಯಗಳು ಶಿಕ್ಷಕರನ್ನು ಶೀಘ್ರವಾಗಿ ನೇಮಕ ಮಾಡಬೇಕು. ಶಾಲೆಯ ಆವರಣದಲ್ಲಿನ ಹಳೆ ಕೊಠಡಿಗಳನ್ನು ನೂತನ ಶಾಲಾ ಕೊಠಡೆಇಗಳನ್ನು ನಿರ್ಮಿಸಬೇಕು. ಶಾಲೆಗೆ ಕುಡಿಯವ ನೀರು ಶೌಚಾಲಯ ಸೇರಿದಂತೆ ಇತರೆ ಸೌಲಭ್ಯಗಳನ್ನು ಒದಗಿಸಬೇಕೆಂದು ಗ್ರಾಮದಲ್ಲಿನ ಸಾರ್ವಜನಿಕರು ಶಿಕ್ಷಕ ಇಲಖೆಯುವರನ್ನು ಒತ್ತಾಯಿಸಿದ್ದಾರೆ. ಶಾಲೆಯಲ್ಲಿನ ಗಣಕಯಂತ್ರಗಳನ್ನು 6ನೇ ತರಗತಿಯ ವಿದ್ಯಾರ್ಥಿಗಳಿಗೆ ಬಿಡುವಿನ ಸಮಯದಲ್ಲಿ ಬಳಕೆ ಮಾಡಲಾಗುತ್ತಿದೆ. ಎನ್ನುವ ಅಳಲನ್ನು ತೊಡಿಕೊಂಡವರು ಮುಖ್ಯ ಶಿಕ್ಷಕ ಮಧುಕೇಶವರವರು ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ. ಶಾಲೆಗೆ ಖಾಯಂ ಶಿಕ್ಷಕರನ್ನು ಶೀಘ್ರವಾಗಿ ನೇಮಕ ಮಾಡಲಾಗುವುದು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಡಾ॥ ಐ.ಆರ್. ಅಕ್ಕಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇಹ ರಚನಾ ವಿಜ್ಞಾನವುಳ್ಳ ಕರುಣಹಸಿಗೆ ಕೃತಿ



**ಕಲಬುರಗಿ,ಅ.21–**ಬಸವ ಸಮಿತಿಯ ಅನುಭವ ಮಂಟಪದಲ್ಲಿ ಲಿಂಗೈಕ್ಯ ಧರ್ಮರಾಜ್ ಅಫ್ಜಲ್ಪುರ್ಕರ್ ಸ್ಮರಣಾರ್ಥ ಜರುಗಿದ ಅರಿವಿನ ಮನೆ 872 ನೆಯ ದತ್ತಿ ಕಾರ್ಯಕ್ರಮದಲ್ಲಿ ಡಾ.ಚಿತ್ಕಳ ಮಠಪತಿ ಅವರು ಮಾತನಾಡಿ ಚನ್ನಬಸವಣ್ಣನವರು ರಚಿಸಿದ ಕರಣ ಹಸಿಗೆ ಕೃತಿಯು ವೈದ್ಯಕೀಯ ವಿಜ್ಞಾನದ ದೇಹ ರಚನಾ ಶಾಸ್ತ್ರವನ್ನು ವೈಜ್ಞಾನಿಕವಾಗಿ ವಿವರಿಸುವ ಕೃತಿಯಾಗಿದೆ ಎಂದು ವೈದ್ಯ ವಿಜ್ಞಾನಿ ಡಾ.ಪಿ ಎಸ್ ಶಂಕರ ಅವರು ಹೇಳಿದ್ದಾರೆ ಎಂದರು . ಚನ್ನಬಸವಣ್ಣನವರು ಸ್ವಯಂಭು ಜ್ಞಾನಿಗಳಾಗಿದ್ದರು ಎಂದು ಅಲ್ಲಮಪ್ರಭುದೇವರು ತಮ್ಮ ವಚನದಲ್ಲಿ ಹೇಳಿದ್ದಾರೆ .ಜ್ಞಾನಕ್ಕೆ ಕಿರಿಯರು ಕಿರಿಯರು ಎಂಬುದು ಇರುವುದಿಲ್ಲ .ಚನ್ನಬಸವಣ್ಣನವರು ಬಸವಣ್ಣನವರ ಅಕ್ಕ ನಾಗಮ್ಮನವರ ಮಗನಾಗಿದ್ದಾರೆ. ಚನ್ನಬಸವಣ್ಣನವರು ತಮ್ಮ ಕಿರಿಯ ವಯಸ್ಸಿನಲ್ಲಿ ಹಿರಿದಾದ ಜ್ಞಾನವನ್ನು ಹೊಂದಿದ್ದರು .ಅವರು ತಮ್ಮ 24ನೆಯ ವಯಸ್ಸಿನಲ್ಲಿಯೇ ಅಪಾರಜ್ಞಾನ ಹೊಂದಿದ್ದರು. ಸೊಲ್ಲಾಪುರದ ಸಿದ್ದರಾಮರಿಗೆ ಲಿಂಗದೀಕ್ಷೆಯನ್ನು ನೀಡಿದವರು .ಆಕಳ ಹಾಲಿನಲ್ಲಿ ತುಪ್ಪವಿದೆ .ಆ ಹಾಲಿಗೆ ಸಂಸ್ಕಾರ ನೀಡಿದಾಗ ತುಪ್ಪವಾಗುವಂತೆ .ನಮ್ಮಲ್ಲೇ ಇರುವ ದೇವರನ್ನು ಸಾಕ್ಷಾತ್ಕಾರಗೊಳಿಸಿಕೊಳ್ಳಲು ನಾವು ಸಂಸ್ಕಾರ ಪಡೆದುಕೊಳ್ಳಬೇಕು ಎಂದು ಶರಣರು ವಚನದಲ್ಲಿ ತಿಳಿಸಿದ್ದಾರೆ ಎಂದು ನುಡಿದರು .

ಕಾರ್ಯಕ್ರಮದಲ್ಲಿ ಕಲ್ಬುರ್ಗಿ ಬಸವ ಸಮಿತಿಯ ಅಧ್ಯಕ್ಷರಾದ ಡಾ. ವಿಲಾಸವತಿ ಕೂಬಾ , ಉಪಾಧ್ಯಕ್ಷರಾದ ಡಾ. ಜಯಶ್ರೀ ದಂಡೆ , ಕಾರ್ಯದರ್ಶಿ ಡಾ. ಆನಂದ ಸಿದ್ಧಾಮಣಿ ,ದತ್ತಿ ದಾಸೋಹಿಗಳಾದ ಭಾರತೀ ಹುಲಗೋಳ , ಡಾ.ಕೆ. ಎಸ್. ವಾಲಿ , ಶರಣಗೌಡ ಪಾಟೀಲ್ ಪಾಳ ,ಬಂಡಪ್ಪ ಕೇಸುರ್ , ಉದ್ದಂಡಯ್ಯ ಭಾಗವಹಿಸಿದರು.

# 1100 ಟನ್ ಕೆಎಂಎಫ್ ಸಿಹಿ ಉತ್ಪನ್ನಗಳ ದಾಖಲೆ ಮಾರಾಟ



**ಬೆಂಗಳೂರು, ಅ.21–** ಕೆಎಂಎಫ್ ಮತ್ತು ಸದಸ್ಯ ಹಾಲು ಒಕ್ಕೂಟಗಳು ಒಟ್ಟಾಗಿ 1100 ಮೆಟ್ರಿಕ್ ಟನ್ ಸಿಹಿ ಉತ್ಪನ್ನಗಳನ್ನು ಮಾರಾಟ ಮಾಡಿ 46 ಕೋಟಿ ರೂ.ಗಳ ದಾಖಲೆಯ ವಹಿವಾಟು ಮಾಡುವ ಮೂಲಕ ಮಹತ್ವದ ಮೈಲುಗಲ್ಲು ನಿರ್ಮಿಸಲಾಗಿದೆ ಎಂದು ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ವರ್ಷಕ್ಕೆ ಹೋಲಿಕೆ ಮಾಡಿದಾಗ ಶೇ.38ರಷ್ಟು ವಹಿವಾಟಿನಲ್ಲಿ ಪ್ರಗತಿಯಾಗಿದ್ದು, ಇದು ಕೆಎಂಎಫ್ ಇತಿಹಾಸದಲ್ಲೆ ಸಾರ್ವಕಾಲಿಕ ದಾಖಲೆಯಾಗಿದೆ ಎಂದು ಹೇಳಿದರು.

2024ರ ದಸರಾ ಮತ್ತು ದೀಪಾವಳಿ ಹಬ್ಬದ ಅವಧಿಯಲ್ಲಿ 725 ಮೆಟ್ರಿಕ್ ಟನ್ ಸಿಹಿ ಉತ್ಪನ್ನಗಳನ್ನು ಮಾರಾಟ 33.48 ಕೋಟಿ ವಹಿವಾಟು ದಾಖಲಿಸಲಾಗಿತ್ತು. ಈ ಬಾರಿ ಹಬ್ಬದ ಅವಧಿಯ ಹೆಚ್ಚುವರಿ ಬೇಡಿಕೆಯನ್ನು ಪರಿಗಣಿಸಿ ಎರಡು ತಿಂಗಳು ಮುಂಚಿತವಾಗಿ ಎಲ್ಲ ಸದಸ್ಯ ಹಾಲು ಒಕ್ಕೂಟಗಳ ಸಹಕಾರದೊಂದಿಗೆ ನಿಖರ ಯೋಜನೆ ರೂಪಿಸಿ ಒಂದು ಸಾವಿರ ಮೆಟ್ರಿಕ್ ಟನ್ ಮಾರಾಟ ಗುರಿ ನಿಗದಿಪಡಿಸಲಾಗಿತ್ತು. ಆದರೆ, ಗುರಿ ಮೀರಿದ ಸಾಧನೆ ಮಾಡಲಾಗಿದೆ ಎಂದು ಅವರು ತಿಳಿಸಿದರು.ನಂದಿನಿ ಬ್ರಾಂಡ್‌ನ ಗುಣಮಟ್ಟ, ಶುದ್ಧತೆ ಮತ್ತು ಗ್ರಾಹಕರ ವಿಶ್ವಾಸದ ಪ್ರತಿಫಲವಾಗಿದ್ದು, ರಾಜ್ಯದ ಹಾಲು ಉತ್ಪಾದಕರ ಶ್ರಮ ಮತ್ತು ಸಹಕಾರಿ ಬಲದ ದೃಢತೆಗೂ ಸಾಕ್ಷಿಯಾಗಿದೆ ಎಂದರು.

ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಶುದ್ಧತೆ, ಗುಣಮಟ್ಟ ಹಾಗೂ ಗ್ರಾಹಕರ ಕೈಗೆಟಕುವ ಬೆಲೆಯಲ್ಲಿ ನಂದಿನಿ ಬ್ರಾಂಡ್‌ಅನ್ನು ಗ್ರಾಹಕರಿಗೆ ಒದಗಿಸಲಾಗುತ್ತಿದೆ. ಪ್ರತಿ ವರ್ಷ ದಸರಾ, ದೀಪಾವಳಿ ಸಂದರ್ಭದಲ್ಲಿ ನಂದಿನಿ ಸಿಹಿ ಉತ್ಪನ್ನಗಳಿಗೆ ಹೆಚ್ಚಿನ ಬೇಡಿಕೆ ಇದೆ. 40ಕ್ಕೂ ಹೆಚ್ಚು ಸಿಹಿ ಉತ್ಪನ್ನಗಳ ಮಾದರಿಗಳ ಉತ್ಪಾದನೆ ಮತ್ತು ಮಾರಾಟಕ್ಕೆ ಕೆಎಂಎಫ್ ಪೂರ್ವಭಾವಿ ಸಿದ್ಧತೆ ಮಾಡಿಕೊಂಡಿತ್ತು ಎಂದರು.

ತುಪ್ಪ, ಬೆಣ್ಣೆ, ಪನ್ನಿರು, ಸಿಹಿ ತಿನಿಸು, ಹಾಲಿನ ಪುಡಿ, ಪಾನೀಯಗಳು ಸೇರಿದಂತೆ 185ಕ್ಕೂ ಹೆಚ್ಚು ಬಗೆಯ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಕರ್ನಾಟಕ ಮಾತ್ರವಲ್ಲದೆ, ಆಂಧ್ರ ಪ್ರದೇಶ, ತೆಲಂಗಾಣ, ತಮಿಳುನಾಡು, ಮಹಾರಾಷ್ಟ್ರ, ಗೋವಾ, ಕೇರಳ, ದೆಹಲಿ ಅಸ್ಸೊಂ, ದುಬೈ ಮತ್ತು ಸಿಂಗಾಪುರಗಳಿಗೂ ಮಾರಾಟ ಮಾಡಲಾಗುತ್ತಿದೆ ಎಂದು ಹೇಳಿದರು.

ಮಾರುಕಟ್ಟೆಯನ್ನು ವಿಸ್ತರಿಸಲು ನಿರಂತರವಾಗಿ ಪ್ರಯತ್ನಿಸಲಾಗುತ್ತಿದೆ. ದೆಹಲಿಯಲ್ಲಿ ಒಂದು ಲಕ್ಷ ಲೀಟರ್ ಹಾಲು ಮಾರಾಟವಾಗುತ್ತಿದೆ ಎಂದ ಅವರು, ಮಧುಮೇಹಿಗಳು ಬಳಸುವಂತಹ ಮೂರು ಉತ್ಪನ್ನಗಳನ್ನು ಇತ್ತಿಚೆಗೆ ಕೆಎಂಎಫ್ ಬಿಡುಗಡೆ ಮಾಡಿದೆ ಎಂದರು.ಕೆಎಂಎಫ್ ಆಡಳಿತಾಧಿಕಾರಿ ಕುಮಾರ್ ಮಾತನಾಡಿ, ಚಿಕ್ಕಬಳ್ಳಾಪುರ ಜಿಲ್ಲಾ ಹಾಲು ಒಕ್ಕೂಟದ ಚುನಾವಣೆ ಪೂರ್ಣಗೊಂಡ ಬಳಿಕ ಕೆಎಂಎಫ್ ಅಧ್ಯಕ್ಷರ ಚುನಾವಣೆ ನಡೆಯಲಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಶಿವಸ್ವಾಮಿ ಮಾತನಾಡಿ, ನಂದಿನಿ ಉತ್ಪನ್ನಗಳಲ್ಲಿ ಕಲಬೆರಕೆ ಇಲ್ಲ, 784 ಮಾದರಿಗಳನ್ನು ಪರೀಕ್ಷೆಗೆ ಒಳಪಡಿಸಲಾಗಿದ್ದು, ಕಲಬೆರಕೆ ಇಲ್ಲ ಎಂಬುದು ದೃಢಪಟ್ಟಿದೆ. ನಕಲಿ ನಂದಿನಿ ಉತ್ಪನ್ನಗಳು ಮಾರುಕಟ್ಟೆಯಲ್ಲಿರುವ ಬಗ್ಗೆ ದೂರುಗಳು ಬಂದಿಲ್ಲ. ಆದರೂ ನಕಲಿ ಮಾಡುವುದನ್ನು ತಪ್ಪಿಸಲು ಕ್ಯೂಆರ್ ಕೋಡ್‌ಅನ್ನು ಅಳವಡಿಸಲಾಗುತ್ತಿದೆ ಎಂದರು.

ನಂದಿನಿ ಪಾರ್ಲರ್‌ಗಳಲ್ಲಿ ಕೆಎಂಎಫ್ ಉತ್ಪನ್ನಗಳನ್ನು ಹೊರತು ಪಡಿಸಿಬೇರೆ ಉತ್ಪನ್ನಗಳನ್ನು ಮಾರಾಟ ಮಾಡಿದರೆ ಲೈಸೆನ್ಸ್ ರದ್ದುಪಡಿಸಲಾಗುವುದು. ಈ ಸಂಬಂಧ ಪರಿಶೀಲನಾ ತಂಡಗಳನ್ನೂ ಕೂಡ ರಚಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.ಕೆಎಂಎಫ್ ಮಾರುಕಟ್ಟೆ ವಿಭಾಗದ ನಿರ್ದೇಶಕ ರಘುನಂದನ್ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಸಿಸಿಟಿವಿ ಕ್ಯಾಮೆರಾ ಕಳವು

**ಕಲಬುರಗಿ,ಅ.21–**ಇಲ್ಲಿನ ಜಯನಗರದ ಎದುರುಗಡೆಯ ಅಣ್ಣೆಮ್ಮ ನಗರದಲ್ಲಿರುವ ಸನ್ ರೈಸ್ ಆಂಗ್ಲ ಮಾಧ್ಯಮ ಶಾಲೆಯ ಮುಂದುಗಡೆಯ ಗೇಟ್‌ಗೆ ಅಳವಡಿಸಿದ್ದ 5 ಸಾವಿರ ರೂ.ಮೌಲ್ಯದ 1 ಸಿಸಿಟಿವಿ ಕ್ಯಾಮೆರಾವನ್ನು ಕಳ್ಳರು ಕಳವು ಮಾಡಿಕೊಂಡು ಹೋಗಿದ್ದಾರೆ. ಈ ಸಂಬಂಧ ಶಾಲೆಯ ಅಧ್ಯಕ್ಷರಾದ ಮಲ್ಲಿನಾಥ ಸಾಹು ಅವರು ಎಂ.ಬಿ.ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ಪ್ರಕರಣ ದಾಖಲಾಗಿದೆ. ತನಿಖೆ ನಡೆದಿದೆ.

## ಅಕ್ಟೋಬರ್ 23ರಂದು ಜಿಲ್ಲಾಡಳಿತದಿಂದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ

**ರಾಯಚೂರು,ಅ.21–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮವನ್ನು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಅಕ್ಟೋಬರ್ 23ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ.

ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕುರಿತು ಪರಮೇಶ್ವರ ಸಾಲಿಮಠ ಅವರು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೌರಕಾರ್ಮಿಕರೊಂದಿಗೆ ದೀಪಾವಳಿ ಹಬ್ಬ ಆಚರಣೆ



**ಸಂಡೂರು.ಅ,21–** ನಮ್ಮ ಅಮ್ಮಾ ಸಂಸ್ಥೆಯ ವತಿಯಿಂದ ತಾಳೂರು ಗ್ರಾಮದಲ್ಲಿ ಮಳೆ ಗಾಳಿ ಬಿಸಿಲಿಗೆ ಕುಗ್ಗದೇ ನಮ್ಮ ದಿನನಿತ್ಯದ ಕಾರ್ಯಕ್ರಮಗಳಿಗೆ ಪೂರಕವಾಗಿ ದುಡಿದು ಕಾರ್ಯನಿರ್ವಹಿಸುತ್ತಿರುವ 05 ಜನ ಮಹಿಳೆಯರು ಮತ್ತು ಒಬ್ಬ ಪುರುಷ ಸೂಪರ್ ವೈಸರ್ ಗುರು ಇವರೆಲ್ಲ ಕಾರ್ಮಿಕರಿಗೆ ಬೆಳಕಿನ ಹಬ್ಬ ದೀಪಾವಳಿ ಹಬ್ಬದ ಶುಭಾಶಯಗಳನ್ನು ಕೋರುವುದರೊಂದಿಗೆ ತಮ್ಮ–ತಮ್ಮ ಕಸ್ಟ ಸುಖಗಳನ್ನು ವಿಚಾರಿಸಿ ನಮ್ಮ ಸಂಸ್ಥೆಯಿಂದ ಆಗಲಿ ಅಥವಾ ಸರ್ಕಾರದಿಂದಾಗಲಿ ಆಗಬೇಕಾದ ಕೆಲಸವೇನಿದ್ದರೆ ಅಗತ್ಯವಾಗಿ ತಿಳಿಸಲು ತಿಳಿಹೇಳಿ ಧೈರ್ಯ ತುಂಬಿ ಸಿಹಿ ನೀಡಿ ಶಾಲು/ಹಾರ ಹೊದಿಸಿ ಸನ್ಮಾನಿಸಿ ತಲಾ ಒಂದೊಂದು ಸೀರೆ ನೀಡಿ ಗೌರವಿಸಿ ಬೆಳಕಿಗೆ ಹಬ್ಬಕ್ಕೆ ಶುಭಕೋರಲಾಯಿತು ಇದರೊಂದಿಗೆ ನಮ್ಮ ಸಂಸ್ಥೆಯ ಪದಾಧಿಕಾರಿಗಳಾದ ಎಂ ಕವಿತಾರುದ್ರಗೌಡ ಅಧ್ಯಕ್ಷರು, ಎಂ ರುದ್ರಗೌಡ ಸಂಸ್ಥಾಪಕ ಪ್ರಧಾನ ಕಾರ್ಯದರ್ಶಿಗಳು ಹಾಗೂ ಸದಸ್ಯರಾದ ಎಸ್ ರುದ್ರಮ್ಮ ಪಂಪಾಪತಿ ಇವರು ಭಾಗವಹಿಸಿ ಸನ್ಮಾನಿಸಿ ಕಾರ್ಯಕ್ರಮವನ್ನು ಸಂತೋಷ ಪೂರ್ವಕವಾಗಿ ಎಶಸ್ವಿಗೊಳಿಸಲಾಯಿತು.

# ನೀರಮಾನ್ವಿ ಶ್ರೀರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ ದೀಪಾವಳಿ ಉತ್ಸವ ಕಾರ್ಯಕ್ರಮ



ಯುವ ಮಾರ್ಗ ಸುದ್ದಿ

**ಮಾನ್ವಿ,ಅ.21–**ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿನ ಪ್ರಸಿದ್ಧ ಪುಣ್ಯ ಕ್ಷೇತ್ರವಾದ ಶ್ರೀ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ ದೀಪಾವಳಿ ಅಂಗವಾಗಿ ನಡೆಯುವ ವಿಶೇಷ ಪೂಜೆ ಹಾಗೂ ಉತ್ಸವ ಕಾರ್ಯಕ್ರಮಗಳಿಗೆ ಶ್ರೀ ರೇಣುಕಾ ಯಲ್ಲಮ್ಮ ದೇವಿ ಮೂರ್ತಿಗೆ ವಿಶೇಷವಾಗಿ ಪೂಜೆ ಸಲ್ಲಿಸುವ ಮೂಲಕ ತಹಸೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಚಾಲನೆ ನೀಡಿದರು.

ಶ್ರೀ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದ ಹಿರಿಯ ಅರ್ಚಕರಾದ ಮಲ್ಲಿಕಾರ್ಜುನ ಪೂಜಾರಿ ಹಾಗೂ ದೇವಸ್ಥಾನದ ಅರ್ಚಕರು ವಿಶೇಷ ಪೂಜೆ ಸಲ್ಲಿಸಿದರು.ದೀಪವಾಳಿ ಹಬ್ಬದ ಅಂಗವಾಗಿ ಪ್ರತಿವರ್ಷ ನಡೆಯುವ ಶ್ರೀ ರೇಣುಕಾ ಯಲ್ಲಮ್ಮ ದೇವಿಯ ಪಲ್ಲಕ್ಕಿ ಉತ್ಸವ ಕಾರ್ಯಕ್ರಮ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಹಾಗೂ ದೇವಿಗೆ ವಿಶೇಷ ಅಲಂಕಾರ ,ಪೂಜೆ ಕಾರ್ಯಕ್ರಮದಲ್ಲಿ ಜಿಲ್ಲೆ ಸೇರಿದಂತೆ ವಿವಿಧ ಭಾಗಗಳ ಸಾವಿರಾರು ಜನರು ಭಾಗವಹಿಸುತ್ತಾರೆ.

# ಜನರ ರಕ್ಷಣೆಗಾಗಿ ಕರ್ತವ್ಯದಲ್ಲಿ ಹುತಾತ್ಮರ ಸೇವೆ ಸ್ಮರಿಸೋಣ : ನಾಗೇಂದ್ರ ಪ್ರಸಾದ್



**ಬಳ್ಳಾರಿ,ಅ.21–**ದೇಶಕ್ಕಾಗಿ ದೇಶದ ರಕ್ಷಣೆಗಾಗಿ ವಿಧಿವಶರಾದ ಮತ್ತು ಸಾರ್ವಜನಿಕರ ನೆಮ್ಮದಿಗೆ ಕಾರಣ ರಾದ ಪೊಲೀಸರ ಹುತಾತ್ಮರ ಬಗ್ಗೆ ಗೌರವ ಭಾವನೆ ಹೊಂದಬೇಕು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಹೇಳಿದರು.

ಅವರು ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಏರ್ಪಡಿಸಿದ್ದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಮ ಮಾತನಾಡಿದರು.

ದೇಶದ ಎಲ್ಲಾ ರಾಜ್ಯ ಮತ್ತು ಕೇಂದ್ರ, ಅರೆಸೇನಾ ಪಡೆಗಳಲ್ಲಿ ದೇಶದ ಆಂತರಿಕ ಭದ್ರತೆಗಾಗಿ ಸಮವಸ್ತ್ರಗಳ ಮೂಲಕ ಕರ್ತವ್ಯದಲ್ಲಿ ಹುತಾತ್ಮರಾದವರ ಸೇವೆಗೆ ನಮನ ಸಲ್ಲಿಸಬೇಕು ಎಂದು ಸ್ಮರಿಸಿದರು.

ಪೊಲೀಸರು ನನಗಿಂತ ನನ್ನ ಕರ್ತವ್ಯ ಮೇಲು ಎಂದು ಭಾವಿಸುತ್ತಾರೆ. ನಾವು ವ್ಯಕ್ತಿಯನ್ನು ಕಳೆದುಕೊಳ್ಳುವುದಿಲ್ಲ, ಬದಲಾಗಿ ಅಮೂಲ್ಯ ಜೀವವನ್ನು ಕಳೆದುಕೊಳ್ಳುತ್ತೇವೆ. ಸಮಾಜದ ಶಾಂತಿಯ ಬದುಕಿಗೆ ಪೊಲೀಸರ ಸೇವೆ ಅತ್ಯಂತ ಶ್ಲಾಘನೀಯವಾದದ್ದು. ಪೊಲೀಸರು ಕರ್ತವ್ಯದ ಒಂದು ಮಾನವ ಸಂಪನ್ಮೂಲ ಎಂದು ಹೇಳಿದರು.

ಬಳ್ಳಾರಿ ವಲಯ ಉಪ ಪೊಲೀಸ್ ಮಹಾ ನಿರೀಕ್ಷಕಿ ವರ್ತಿಕ ಕಟಿಯಾರ್ ಅಧ್ಯಕ್ಷತೆ ವಹಿಸಿ , ಪೊಲೀಸ್ ಹುತಾತ್ಮರ ದಿನವನ್ನು ಪ್ರತಿ ವರ್ಷ ಅಕ್ಟೋಬರ್ 21 ರಂದು ಆಚರಿಸಲಾಗುತ್ತದೆ. ಈ ದಿನವನ್ನು ಪೊಲೀಸ್ ಸಂಸ್ಮರಣಾ ದಿನ ಎಂದೂ ಕರೆಯುತ್ತೇವೆ. 1958 ರಲ್ಲಿ ಲಡಾಖ್‌ನ ಹಾಟ್ ಸ್ಪ್ರಿಂಗ್ ನಲ್ಲಿ ಚೀನಾ ಸೈನಿಕರೊಂದಿಗಿನ ಘರ್ಷಣೆಯಲ್ಲಿ ಪ್ರಾಣತ್ಯಾಗ ಮಾಡಿದ 10 ಪೊಲೀಸ್ ಅಧಿಕಾರಿಗಳನ್ನು ಗೌರವಿಸಲು 1960 ರ ಅಕ್ಟೋಬರ್ 21 ರಂದು, ವೀರ ಪೊಲೀಸರ ತ್ಯಾಗವನ್ನು ಗೌರವಿಸಲು ಪೊಲೀಸ್ ಸಂಸ್ಮರಣಾ ದಿನವನ್ನಾಗಿ ಆಚರಿಸಲಾಗುತ್ತದೆಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಮಾತನಾಡಿ, ಪೊಲೀಸರ ತ್ಯಾಗ ಮತ್ತು ರಾಷ್ಟ್ರೀಯ ಭದ್ರತೆ ಮತ್ತು ಸಮಗ್ರತೆಯನ್ನು ಕಾಪಾಡುವಲ್ಲಿ ಎಲ್ಲರೂ ಕೈಜೋಡಿಸಬೇಕು. ದೇಶದಲ್ಲಿ 191 ಪೊಲೀಸರು ಮತ್ತು ಕರ್ನಾಟಕದಲ್ಲಿ 8 ಜನ ಪೊಲೀಸರು ಹುತಾತ್ಮರಾಗಿದ್ದರೆ ಎಂದು ಹೇಳಿದರು.

ಇದಕ್ಕೂ ಮೊದಲು ಆರ್‌ಪಿಎಫ್ ಕಮಾಂಡರ್ ಸಿಕೀಂದ್ರ ಅವರು ಪೊಲೀಸ್ ತುಕಡಿಗಳಿಂದ ವಂದನೆ ಸ್ವೀಕರಿಸಿದರು. ನಂತರ ಪಥ ಸಂಚಲನ ಮೂಲಕ ಹುತಾತ್ಮರ ಶಾಂತಿಗಾಗಿ ಗಣ್ಯರು ಪುಷ್ಪ ನಮನ ಸಲ್ಲಿಸಿದರು. ಆ ಬಳಿಕ ಧ್ವಜವನ್ನು ಅರ್ಧಕ್ಕೆ ಇಳಿಸಿ ಏರಿಸಲಾಯಿತು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಕೆ.ಪಿ.ರವಿಕುಮಾರ್, ಎಸ್.ನವೀನ್ ಕುಮಾರ್ ಸೇರಿದಂತೆ ಪೊಲೀಸ್ ಅಧಿಕಾರಿಗಳು, ಇದ್ದರು.

# ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಆಗ್ರಹಿಸಿ ಪಂಜಿನ ಮೆರವಣಿಗೆ




**ವಿಜಯಪುರ,ಅ. 21–**ನಗರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಆಗ್ರಹಿಸಿ 31 ದಿನದಿಂದ ಅನಿರ್ಧಿಷ್ಟ ಧರಣಿ ನಡೆದರೂ ಸ್ಪಂದಿಸದ ರಾಜ್ಯ ಸರ್ಕಾರದ ನಿರ್ಲಕ್ಷ್ಯವನ್ನು ಖಂಡಿಸಿ ಸ್ಥಾಪನಾ ಸಮಿತಿಯ ಹೋರಾಟಗಾರರು ಶನಿವಾರ ಪಂಜಿನ ಮೆರವಣಿಗೆ ನಡೆಸಿದರು.

ನಗರದ ಶಿವಾಜಿ ವೃತ್ತದಿಂದ ಆರಂಭವಾದ ಪಂಜಿನ ಮೆರವಣಿಗೆ ಗಾಂಧಿ ಚೌಕ್, ಸರಾಫ್ ಬಜಾರ್, ಹೆಡಗೆವಾರ್ ವೃತ್ತ, ಸಿದ್ದೇಶ್ವರ ದೇವಸ್ಥಾನ, ಗಾಂಧಿ ಚೌಕ್, ಬಸವೇಶ್ವರ ವೃತ್ತದ ಮೂಲಕ ಸಾಗಿ ಅಂಬೇಡ್ಕರ್ ವೃತ್ತದಲ್ಲಿರುವ ಧರಣಿ ಸ್ಥಳಕ್ಕೆ ತಲುಪಿ ಸಮಾಪ್ತಿಯಾಯಿತು.

ಸರ್ಕಾರಿ ವೈದ್ಯಕೀಯ ಕಾಲೇಜು ಹೋರಾಟಕ್ಕೆ ಒಂದು ತಿಂಗಳು ಕಳೆದರೂ , ಸರ್ಕಾರ ಕಣ್ಣು ಮುಚ್ಚಿ ಕೂತಂತಿದೆ. ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್, ಸಚಿವ ಶಿವಾನಂದ್ ಪಾಟೀಲ್ ಮತ್ತು ಶಾಸಕರು ಸರ್ಕಾರದ ಗಮನ ಸೆಳೆಯುವಲ್ಲಿ ವಿಫಲವಾಗಿದ್ದಾರೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಹೋರಾಟ ಸಮಿತಿಯ ಸದಸ್ಯರಾದ ಭಗವಾನ್ ರೆಡ್ಡಿ, ಲಲಿತಾ ಬಿಜ್ಜರಗಿ, ಲಕ್ಷ್ಮಣ್ ಕಂಬಾಗಿ, ಗಿರೀಶ್ ಕಲಘಟಗಿ, ಭೋಗೇಶ್ ಸೋಲಾಪುರ್, ಜಗದೇವ್ ಸೂರ್ಯವಂಶಿ, ಸಿದ್ದರಾಮ್ ಹಲ್ಲೂರ್, ಅರವಿಂದ್ ಕುಲಕರ್ಣಿ, ಮಲ್ಲಿಕಾರ್ಜುನ್ ಎಚ್, ಬಾಬು ಬಿಜಾಪುರ, ಶಿವಬಾಲಮ್ಮ ಕೊಂಡಗುಲಿ, ಗೀತಾ ಎಚ್, ಭರತ ಕುಮಾರ್, ಅಕ್ರಂ ಮಾಶಾಳಕರ್, ಸುರೇಶ್ ಬಿಜಾಪುರ, ಶ್ರೀನಾಥ್ ಪೂಜಾರಿ, ಮಹಾದೇವಿ ಧರ್ಮಶೆಟ್ಟಿ, ನೀಲಂಬಿಕಾ ಬಿರಾದಾರ, ಸುಶೀಲಾ ಮಿಣಜಗಿ, ಸಿದ್ದರಾಮಯ್ಯ ಹಿರೇಮಠ, ವರದಾ ಧರ್ಮಶೆಟ್ಟಿ ಹಾಗೂ ಅಂಗವಿಕಲ ಸಂಘದ ಸದಸ್ಯರು ಕೂಡ ಇದ್ದರು.

## ರಾಯಚೂರು ಜಿಲ್ಲೆಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರವಾಸ

**ರಾಯಚೂರು,ಅ.21–** ರಾಜ್ಯದ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಅಕ್ಟೋಬರ್ 22ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆಳಗ್ಗೆ 8 ಗಂಟೆಗೆ ಮಂತ್ರಾಲಯದ ರಾಘವೇಂದ್ರ ಸ್ವಾಮಿಗಳ ದರ್ಶನ ಪಡೆದುಕೊಂಡು ಅಲ್ಲಿಂದ 9.30ಕ್ಕೆ ನಿರ್ಗಮಿಸಿ ಬೆಳಿಗ್ಗೆ 10 ಗಂಟೆಗೆ ರಾಯಚೂರು ತಾಲೂಕಿನ ಬಿಚ್ಚಾಲಿ ಗ್ರಾಮಕ್ಕೆ ಆಗಮಿಸಿ ಪೂಜಾ ಕಾರ್ಯಕ್ರಮದಲ್ಲಿ ಭಾಗಿಯಾಗುವರು. 10.30ಕ್ಕೆ ಬಿಚ್ಚಾಲಿಯಿಂದ ನಿರ್ಗಮಿಸಿ 11 ಗಂಟೆಗೆ ರಾಯಚೂರು ಗ್ರಾಮೀಣ ಪ್ರದೇಶದಲ್ಲಿನ ಶ್ರೀಪಂಚಮುಖಿ ಆಂಜನೇಯ ಸ್ವಾಮಿ ದೇವಸ್ಥಾನದ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬಳಿಕ ಬೆಳಿಗ್ಗೆ 11.30ಕ್ಕೆ ಪಕ್ಷದ ಕಾರ್ಯಕ್ರಮದಲ್ಲಿ ಭಾಗಿಯಾಗುವರು. ಮಧ್ಯಾಹ್ನ 12.30ಕ್ಕೆ ಪಂಚಮುಖಿಯಿಂದ ನಿರ್ಗಮಿಸಿ ಮಂತ್ರಾಲಯಕ್ಕೆ ತೆರಳುವರು. ಸಂಜೆ 6.55ಕ್ಕೆ ಮಂತ್ರಾಲಯದಿಂದ ರೈಲು ಮಾರ್ಗವಾಗಿ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಉಪಮುಖ್ಯಮಂತ್ರಿಗಳ ಹೆಚ್ಚುವರಿ ಖಾಸಗಿ ಕಾರ್ಯದರ್ಶಿ ಬಿ.ಎಸ್. ಶ್ರೀಧರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವರಾದ ಎನ್.ಎಸ್.ಬೋಸರಾಜು ರಾಯಚೂರು ಜಿಲ್ಲಾ ಪ್ರವಾಸ

**ರಾಯಚೂರು,ಅ.21–** ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಬೋಸರಾಜು ಅವರು 22ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆಳಿಗ್ಗೆ 10 ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ ಬೆಳಿಗ್ಗೆ 11 ಗಂಟೆಗೆ ಸಿರವಾರ ಹಾಗೂ ಕವಿತಾಳನಲ್ಲಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗಿಯಾಗುವರು. ಸಂಜೆ 4 ಗಂಟೆಗೆ ಕವಿತಾಳದಿಂದ ನಿರ್ಗಮಿಸಿ ಅಲ್ಲಿಂದ ರಾಯಚೂರಿಗೆ ಆಗಮಿಸಿ ವಾಸ್ತವ್ಯ ಮಾಡಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಯಾದ ವೀರಭದ್ರ ಹಂಚಿನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ಟೋಬರ್ ಕೊನೆ ವಾರದಲ್ಲಿ 10 ದಿನಗಳ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮ

**ರಾಯಚೂರು,ಅ.21–** ಇಲ್ಲಿನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಮತ್ತು ಕರ್ನಾಟಕ ಉದ್ಯಮಶಿಲತಾಭಿವೃದ್ಧಿ ಕೇಂದ್ರ (ಸಿಡಾಕ್) ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸ್ವಯಂ ಉದ್ಯಮಗಳನ್ನು ಪ್ರಾರಂಭಿಸಲು ಜಿಲ್ಲೆಯ ಆಸಕ್ತ ಪರಿಶಿಷ್ಟ ಜಾತಿಯ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳಿಗೆ 10 ದಿನಗಳ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮವನ್ನು 2025 ಅಕ್ಟೋಬರ್ ಕೊನೆ ವಾರದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಸ್ವಯಂ ಉದ್ಯಮಗಳ ಬಗ್ಗೆ ಮಾಹಿತಿ, ಉದ್ಯಮಶೀಲತೆ, ಯಶಸ್ವಿ ಉದ್ಯಮಶೀಲರ ಗುಣಲಕ್ಷಣಗಳು, ನಾಯಕತ್ವದ ಗುಣಲಕ್ಷಣಗಳು, ಉದ್ಯಮವನ್ನು ಆಯ್ಕೆ ಮಾಡುವ ವಿಧಾನ, ವ್ಯಾಪಾರೋದ್ಯಮಗಳ ಅವಕಾಶಗಳು, ಉದ್ಯಮಗಳನ್ನು ಪ್ರಾರಂಭಿಸುವ ಹಂತಗಳು, ಸ್ವಯಂ ಉದ್ಯೋಗಕ್ಕೆ ಇರುವ ಸರ್ಕಾರದ ಯೋಜನೆಗಳು, ಬ್ಯಾಂಕ್ ವ್ಯವಹಾರ ಮಾಡುವ ಬಗ್ಗೆ, ಸಾಲ ಮತ್ತು ಹಣಕಾಸು ಮತ್ತು ಹಣಕಾಸೇತರ ಸೌಲಭ್ಯಗಳ ಬಗ್ಗೆ, ಲೆಕ್ಕ ಪತ್ರ ನಿರ್ವಹಣೆ. ಯೋಜನಾ ವರದಿ ತಯಾರಿಕೆ, ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವಲ್ಲಿ ಸಹಾಯ ನೀಡುವುದು ಹಾಗೂ ಈಗಾಗಲೇ ಸಿಡಾಕ್ ಮುಖಾಂತರ ತರಬೇತಿ ಪಡೆದು ಉದ್ಯಮಗಳನ್ನು ಯಶಸ್ವಿಯಾಗಿ ನಡೆಸಿಕೊಂಡು ಹೋಗುತ್ತಿರುವ ಉದ್ಯಮಶೀಲರ ಅನುಭವ ಹಂಚಿಕೆ ಮತ್ತು ಸಂಬಂಧಪಟ್ಟ ಇತ್ಯಾದಿ ವಿಷಯಗಳ ಬಗ್ಗೆ ಅನುಭವಿ ಅತಿಥಿ ಬೋಧಕರಿಂದ ಉಪನ್ಯಾಸ / ಮಾಹಿತಿ ನೀಡಲಾಗುವುದು.

ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರಿರುವ 20 ರಿಂದ 45 ವರ್ಷದೊಳಗಿನ ಕನಿಷ್ಠ ಎಸ್‌ಎಸ್‌ಎಲ್‌ಸಿ ಪಾಸ್/ಫೇಲ್ ಆದ ಪರಿಶಿಷ್ಟ ಜಾತಿಯ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳು ಜಂಟಿ ನಿರ್ದೇಶಕರು, ಸಿಡಾಕ್, ಕಟ್ಟಡ ಸಂಖ್ಯೆ : 1–4–156 (ಹಳೆಯ) 1–4–805 (ಹೊಸ), ನಂದೀಶ್ವರ ಗುಡಿ ಹತ್ತಿರ, ನವೀನ್ ಹಾಸ್ಪಿಟಲ್ ಪಕ್ಕದಲ್ಲಿ, ಐ.ಬಿ ರಸ್ತೆ, ರಾಯಚೂರು–584103 ಮೊಬೈಲ್ ಸಂಖ್ಯೆ: 9986600631ಗೆ ಕರೆ ಮಾಡಿ ಅಕ್ಟೋಬರ್ 25ರೊಳಗಾಗಿ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು. ಹುಡೇದ್ ಅವರು ಪ್ರಕಟಣೆಯಲ್ಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ಟೋಬರ್ 31ರಂದು ಪ್ರಧಾನಮಂತ್ರಿ ರಾಷ್ಟ್ರೀಯ ಶಿಷ್ಯ ವೃತ್ತಿ ಮೇಳ

**ರಾಯಚೂರು,ಅ.21–** ಜಿಲ್ಲೆಯ ಲಿಂಗಸುಗೂರಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ವಿವಿಧ ಉದ್ದಿಮೆದಾರರ ವತಿಯಿಂದ ಐಟಿಐ ಅಭ್ಯರ್ಥಿಗಳಿಗೆ ಪ್ರಧಾನಮಂತ್ರಿ ರಾಷ್ಟ್ರೀಯ ಶಿಷ್ಯ ವೃತ್ತಿ ಜಿಲ್ಲಾ ಮಟ್ಟದ ಮೇಳವನ್ನು ಅಕ್ಟೋಬರ್ 31ರ ಬೆಳಿಗ್ಗೆ 10 ಗಂಟೆಗೆ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಸಂದರ್ಶನಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಅಭ್ಯರ್ಥಿಗಳು ಭಾಗವಹಿಸಿ ಮೇಳದ ಲಾಭವನ್ನು ಪಡೆಯುವಂತೆ ಲಿಂಗಸುಗೂರಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H